ಸಂಪುಟ: 06 ಸಂಚಿಕೆ: 95 ಪುಟಗಳು: 08 ಗುರುವಾರ 18 ಜೂನ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ನಮಗೆ ತೊಂದರೆ ಕೊಟ್ಟವರನ್ನೆಂದೂ ಮರೆಯಬಾರದು, ನಾವು ಗಟ್ಟಿಯಾಗಿ ನಿಲ್ಲಲು ಸಾಧ್ಯವಾಗಿದ್ದೇ ಅವರಿಂದ. ಅವರಿಗೊಂದು ಧನ್ಯವಾದವಿರಲಿ!

# ನಮೋ ಕಳವಳ ಟ್ರಂಪ್‌ಗೆ ತಳಮಳ

ಶೃಂಗದಲ್ಲಿ ಹೊಸ ಪಾಲುದಾರಿಕೆ

**ಹಲವಾರು ಭಾರತೀಯರು ಜೀವ ಕಳೆದುಕೊಂಡಿದ್ದಾರೆ?**

ಟ್ರಂಪ್ ಸಮ್ಮುಖದಲ್ಲಿ ನಾವಿಕರ ಸುರಕ್ಷತೆ ಬಗ್ಗೆ ದನಿ ಎತ್ತಿದ ಮೋದಿ


• ಉದಯವಾಹಿನಿ, ದೆಹಲಿ

ಫ್ರಾನ್ಸ್‌ನ ಎವಿಯನ್-ಲೆ-ಬೈನ್ಸ್‌ನಲ್ಲಿ ನಡೆಯುತ್ತಿರುವ ಜಿ7 ಶೃಂಗಸಭೆಯಲ್ಲಿ ಭಾರತ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭೇಟಿಯಾಗಿ, ಪರಸ್ಪರ ಕುಶಲೋಪರಿ ವಿಚಾರಿಸಿದ್ದಾರೆ. ಸುಮಾರು 16 ತಿಂಗಳ ಬಳಿಕ ಉಭಯ ನಾಯಕರು ನೇರ ಮುಖಾಮುಖಿಯಾಗಿ ಮಾತುಕತೆ ನಡೆಸಿದರು. ಬಳಿಕ ಶೃಂಗದಲ್ಲಿ ಹೊಸ ಪಾಲುದಾರಿಕೆ ರೂಪಿಸುವುದು ಮತ್ತು ಅಂತಾರಾಷ್ಟ್ರೀಯ ಒಗ್ಗಟ್ಟಿನ ಪುನರ್ನಿರ್ಮಾಣ ಕುರಿತಾಗಿ ಅಧಿವೇಶನ ಉದ್ದೇಶಿಸಿ ಪ್ರಧಾನಿ ಮೋದಿ ಮಾತನಾಡಿದರು. ಈ ವೇಳೆ ಅಮೆರಿಕದ ಮಿಲಿಟರಿ ದಾಳಿಯಲ್ಲಿ ಇತ್ತೀಚೆಗೆ ಸಾವನ್ನಪ್ಪಿದ ಭಾರತೀಯ ನಾವಿಕರ ವಿಷಯ ಪ್ರಸ್ತಾಪಿಸಿದರು. ಟ್ರಂಪ್ ಸಮ್ಮುಖದಲ್ಲೇ ಭಾರತೀಯ ನಾವಿಕರ ಸುರಕ್ಷತೆ ಬಗ್ಗೆ ದನಿ ಎತ್ತಿದರು. ಅಮೆರಿಕ-ಇರಾನ್ ಸಂಘರ್ಷವು ಆ ಪ್ರದೇಶದಲ್ಲಿರುವ ದೇಶಗಳ ಮೇಲೆ ಗಮನಾರ್ಹ ಮಾನವ ಮತ್ತು ಆರ್ಥಿಕ ನಷ್ಟವನ್ನ ಉಂಡುಮಾಡಿದೆ ಎಂದು ಹೇಳಿದರು. ಸದ್ಯ ಪಶ್ಚಿಮ ಏಷ್ಯಾದಲ್ಲಿ ಶಾಂತಿ ಒಪ್ಪಂದದಲ್ಲಿ ಪ್ರಗತಿಯನ್ನ ನಾವು ಸ್ವಾಗತಿಸುತ್ತೇವೆ. ಆದ್ರೆ ಕಳೆದ ಕೆಲ ದಿನಗಳಲ್ಲಿ ನಮ್ಮ ಮಿತ್ರ ರಾಷ್ಟ್ರಗಳಲ್ಲಿ ಜೀವ ಮತ್ತು ಆಸ್ತಿಪಾಸ್ತಿ ನಷ್ಟಕ್ಕೆ ಈ ಸಂಘರ್ಷ ಕಾರಣವಾಗಿದೆ. ಹಾರ್ಮುಜ್ ಜಲಸಂಧಿಯ ನಿರ್ಬಂಧದಿಂದ ಸಮುದ್ರ ವ್ಯಾಪಾರಕ್ಕೆ ಉಂಟಾದ ಅಡ್ಡಿಯು ಜಾಗತಿಕ ಆರ್ಥಿಕತೆಯ ಮೇಲೆ ಪರಿಣಾಮ ಬೀರಿದೆ. ಹಲವಾರು ಭಾರತೀಯರೂ ತಮ್ಮ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಗಮನ ಸೆಳೆದರು.

**ಸುರಕ್ಷಿತ ಸಮುದ್ರ ಮಾರ್ಗಗಳಿಗೆ ಕರೆ:** ಇನ್ನೂ ಪಶ್ಚಿಮ ಏಷ್ಯಾ ಸಂಘರ್ಷದ ವ್ಯಾಪಕ ಪರಿಣಾಮ ಎತ್ತಿ ತೋರಿಸಿದ ಪ್ರಧಾನಿ, ಸಮುದ್ರ ವ್ಯಾಪಾರದಲ್ಲಿನ ಅಡಚಣೆಗಳು ಮತ್ತು ಪ್ರಮುಖ ಹಡಗು ಕಾರಿಡಾರ್‌ಗಳಲ್ಲಿ ಕಾರ್ಯನಿರ್ವಹಿಸುವ ನಾವಿಕರು ಎದುರಿಸುತ್ತಿರುವ ಅಪಾಯಗಳ ಬಗ್ಗೆ ಗಮನ ಸೆಳೆದರು. ಜಾಗತಿಕ ಸಮುದ್ರ ವ್ಯಾಪಾರದ ಮೂಲಕ ರಾಷ್ಟ್ರಗಳನ್ನು ಸಂಪರ್ಕಿಸುವ ನಾವಿಕರ ಸುರಕ್ಷತೆ ಖಚಿತಪಡಿಸಿಕೊಳ್ಳುವುದು ನಮ್ಮ ಸಾಮೂಹಿಕ ಜವಾಬ್ದಾರಿಯಾಗಿದೆ. ಸಮುದ್ರ ಮಾರ್ಗಗಳು ಸುರಕ್ಷಿತವಾಗಿರುವುದನ್ನ ಮತ್ತು ನಾವಿಕರು ಭಯವಿಲ್ಲದೆ ತಮ್ಮ ಕರ್ತವ್ಯ ನಿರ್ವಹಿಸಬಹುದು ಎಂಬುದನ್ನ ನಾವು ಖಚಿತಪಡಿಸಿಕೊಳ್ಳಬೇಕು. ಅದಕ್ಕಾಗಿ ಅಂತಾರಾಷ್ಟ್ರೀಯ ಸಹಕಾರ ಬಲಪಡಿಸಲು ಭಾರತ ಎಲ್ಲಾ ದೇಶಗಳೊಂದಿಗೆ ಕೆಲಸ ಮಾಡಲು ಸಿದ್ಧವಾಗಿದೆ ಎಂದು ಪ್ರಧಾನಿ ಹೇಳಿದರು. ಅಮೆರಿಕ ಅಧ್ಯಕ್ಷರೊಂದಿಗಿನ ದ್ವಿಪಕ್ಷೀಯ ಮಾತುಕತೆಗೆ ಒಂದು ದಿನ ಮೊದಲು ಪ್ರಧಾನಿ ಮೋದಿ ಈ ವಿಷಯ ಪ್ರಸ್ತಾಪಿಸಿದರು.

**ಮತ್ತೆ ಮೆಲೋಡಿ ಮೋಡಿ:** ಫ್ರಾನ್ಸ್‌ನಲ್ಲಿ ನಡೆದ ಜಿ7 ಶೃಂಗಸಭೆಯಲ್ಲಿ ಅನೇಕ ಗಂಭೀರ ವಿಚಾರಗಳು ಚರ್ಚೆಯಾಗಿವೆ. ಇದರ ಜೊತೆಗೆ ಹಾಸ್ಯಮಯ ಸನ್ನಿವೇಶವೂ ನಡೆಯಿತು. ಈ ಸಭೆಯಲ್ಲಿ ಭಾಗವಹಿಸಿದ್ದ ಜಾಗತಿಕ ನಾಯಕರ ತಮಾಷೆಯ ಕ್ಷಣಗಳು ಕೂಡ ರೆಕಾರ್ಡ್ ಆಗಿದೆ. ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಧೂಮಪಾನ ತ್ಯಜಿಸಿದ ರಹಸ್ಯ ಬಿಚ್ಚಿಟ್ಟಿರುವುದು, ಫ್ರಾನ್ಸ್ ಅಧ್ಯಕ್ಷ ಮ್ಯಾಕ್ರನ್ ಮರೆತುಹೋದ ವಾಚ್ ಮೇಲೆ ಟ್ರಂಪ್ ಕಣ್ಣು, ಫಿಫಾ ವಿಶ್ವಕಪ್ ಕುರಿತ ನಾಯಕರ ಹರಟೆ ಮುಂತಾದ ಕ್ಷಣಗಳು ಸೆರೆಯಾಗಿವೆ. ಜಿ7 ಸಭೆಯ ಮುನ್ನ ಜರ್ಮನ್ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್ ಅವರು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರಿಗೆ, ಇವತ್ತು ಬೆಳಗ್ಗೆ ಸಿಗರೇಟ್ ಸೇದಿದ್ದೀರಾ? ಎಂದು ತಮಾಷೆಯಾಗಿ ಕೇಳಿದ್ದಾರೆ.

ಅದಕ್ಕೆ ಮೆಲೋನಿ, ನಾನು ಕಳೆದ ಮೇ 1ರಿಂದ ಸಿಗರೇಟ್ ಮುಟ್ಟಿಲ್ಲ, ಧೂಮಪಾನ ಬಿಟ್ಟಿದ್ದೇನೆ ಎಂದು ಉತ್ತರಿಸಿದ್ದಾರೆ. ಇದು ಆಕಸ್ಮಿಕವಾಗಿ ಆನ್ ಆಗಿದ್ದ ಅವರ ಮೈಕ್ ಮೂಲಕ ಸುತ್ತಲಿದ್ದವರಿಗೆಲ್ಲ ಕೇಳಿದೆ. ಇದನ್ನು ಕೇಳಿದ ತಕ್ಷಣ ಟೇಬಲ್ ಸುತ್ತ ಕುಳಿತಿದ್ದ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್, ಜಪಾನ್ ಪ್ರಧಾನಿ ಸನಾ ಇ ಟಕೈಚಿ ಸೇರಿದಂತೆ ಹಲವರು ಜೋರಾಗಿ ಚಪ್ಪಾಳೆ ತಟ್ಟಿ ಮೆಲೋನಿಗೆ ಅಭಿನಂದನೆ ಸಲ್ಲಿಸಿದರು. ಕಾರ್ನಿ ಅವರು, ಹಾಗಾದರೆ ಏನಾದರೂ ನಿಕೋಟಿನ್ ಪ್ಯಾಚ್ ಬಳಸುತ್ತಿದ್ದೀರಾ ಎಂದು ಕೇಳಿದಾಗ, ಮೆಲೋನಿ ಎರಡು ಕೈಗಳನ್ನು ಎತ್ತಿ ನಗುತ್ತಿರುವ ವಿಡಿಯೋ ವೈರಲ್ ಆಗಿದೆ. ಬ್ರಿಟನ್ ಪ್ರಧಾನಿ ಸ್ಟಾರ್ಮರ್ ಅವರು ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಅವರಿಗೆ ಕೇಳಿದಾಗ, ಕೋಸ್ಟಾ ತಾವು ಕಳೆದ 21 ವರ್ಷಗಳಿಂದ ಸಿಗರೇಟ್ ಮುಟ್ಟಿಲ್ಲ ಎಂದು ಹೆಮ್ಮೆಯಿಂದ ಹೇಳಿಕೊಂಡಿದ್ದಾರೆ.







## ಇರಾನ್‌ಗೆ ಡೊನಾಲ್ಡ್ ಟ್ರಂಪ್ ಎಚ್ಚರಿಕೆ

ಮಧ್ಯಪ್ರಾಚ್ಯದಲ್ಲಿ ಶಾಂತಿ ಸ್ಥಾಪನೆಯ ನಿಟ್ಟಿನಲ್ಲಿ ಅಮೆರಿಕ ಮತ್ತು ಇರಾನ್ ನಡುವೆ ಮಹತ್ವದ ಒಪ್ಪಂದ ಏರ್ಪಟ್ಟಿದೆ ಎಂಬ ಜಾಗತಿಕ ವರದಿಗಳ ಬೆನ್ನಲ್ಲೇ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಎಂದಿನ ಆಕ್ರಮಣಕಾರಿ ಶೈಲಿಯಲ್ಲಿ ಇರಾನ್‌ಗೆ ಕಠಿಣ ಸಂದೇಶ ರವಾನಿಸಿದ್ದಾರೆ. ಫ್ರಾನ್ಸ್‌ನ ಎವಿಯಾನ್-ಲೆ-ಬೈನ್ಸ್‌ನಲ್ಲಿ ನಡೆಯುತ್ತಿರುವ ಜಿ7 ಶೃಂಗಸಭೆಯ ಸಂದರ್ಭದಲ್ಲಿ ಮಾತನಾಡಿದ ಟ್ರಂಪ್, ಪ್ರಸ್ತುತ ಇರಾನ್ ಜೊತೆಗೆ ಆಗಿರುವುದು ಅಂತಿಮ ಒಪ್ಪಂದವಲ್ಲ ಎಂದು ಹೇಳಿದ್ದಾರೆ. ಇರಾನ್ ಮತ್ತು ಅಮೆರಿಕ ನಡುವಿನ ಒಪ್ಪಂದದ ನಿಯಮಗಳ ಕುರಿತು ಜಿ7 ನಾಯಕರೊಂದಿಗೆ ಚರ್ಚಿಸುವಾಗ ಡೊನಾಲ್ಡ್ ಟ್ರಂಪ್ ಈ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಇರಾನ್ ಜೊತೆಗಿನ ಪ್ರಸ್ತುತ ಮಾತುಕತೆಗಳು ಇನ್ನು ಪ್ರಗತಿಯಲ್ಲಷ್ಟೇ ಇವೆ. ಆ ಒಪ್ಪಂದದ ಅಂತಿಮ ಅಗ್ರಿಮೆಂಟ್ ನನ್ನ ಮೇಜಿನ ಮೇಲೆ ಬಂದಾಗ, ಅದರಲ್ಲಿರುವ ಪ್ರತಿಯೊಂದು ನಿಯಮವೂ ನನಗೆ ಇಷ್ಟವಾಗಬೇಕು. ಒಂದು ವೇಳೆ ಆ ಒಪ್ಪಂದದಲ್ಲಿ ನನಗೆ ಸಣ್ಣ ಲೋಪದೋಷ ಕಂಡುಬಂದರೂ ಅಮೆರಿಕ ತಕ್ಷಣವೇ ಒಪ್ಪಂದದಿಂದ ಹಿಂದೆ ಸರಿಯಲಿದೆ. ಅಷ್ಟೇ ಅಲ್ಲ, ನಾವು ಇರಾನ್ ಮೇಲೆ ಮತ್ತೆ ಬಾಂಬ್‌ಗಳ ಮಳೆ ಸುರಿಸುವುದು ಖಚಿತ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

**6 ತಿಂಗಳ ಬಳಿಕ**
ಮೋದಿ- ಟ್ರಂಪ್ ಮಾತುಕತೆ



## ಜಾಗತಿಕ ಸಂಸ್ಥೆಗಳ ಜವಾಬ್ದಾರಿ

ಅಭಿವೃದ್ಧಿಯ ಅವಕಾಶಗಳು ಕೇವಲ ಕೆಲವು ಶ್ರೀಮಂತ ದೇಶಗಳಿಗೆ ಮಾತ್ರ ಸೀಮಿತವಾಗದೆ, ಜಾಗತಿಕ ಸಂಸ್ಥೆಗಳು ಎಲ್ಲಾ ರಾಷ್ಟ್ರಗಳ ಆಕಾಂಕ್ಷೆಗಳನ್ನು ಈಡೇರಿಸಬಲ್ಲವು ಎಂಬ ನಂಬಿಕೆಯನ್ನು ಹುಟ್ಟುಹಾಕಬೇಕಿದೆ. ಕೋವಿಡ್- 19 ಸಾಂಕ್ರಾಮಿಕದ ಕಹಿ ನೆನಪನ್ನು ಉಲ್ಲೇಖಿಸಿದ ಪ್ರಧಾನಿ ಮೋದಿ, ದಶಕಗಳ ಕಾಲ ಹಲವು ತಲೆಮಾರುಗಳು ಶ್ರಮಿಸಿ ಕಟ್ಟಿದ್ದ ವಿಶ್ವಾಸ ಈಗ ಹದಗೆಡುತ್ತಿದೆ. ಕೋವಿಡ್ ಸಾಂಕ್ರಾಮಿಕವು ನಮಗೆ ಕನ್ನಡಿ ಹಿಡಿದು ತೋರಿಸಿದ್ದು, ಅಂತಾರಾಷ್ಟ್ರೀಯ ಒಗ್ಗಟ್ಟು ಮತ್ತು ಪರಸ್ಪರ ವಿಶ್ವಾಸದ ಜಾಗತಿಕ ಹಕ್ಕುಗಳು ತುರ್ತು ಪರಿಸ್ಥಿತಿಯ ಸಮಯದಲ್ಲಿ ಎಷ್ಟು ಟೊಳ್ಳಾಗಿದ್ದವು ಎಂಬುದನ್ನು ಬಹಿರಂಗಪಡಿಸಿದೆ, ಎಂದು ಜಾಗತಿಕ ನಾಯಕರ ಸಮ್ಮುಖದಲ್ಲೇ ಮುಚ್ಚುಮರೆಯಿಲ್ಲದೆ ಅಸಮಾಧಾನ ಹೊರಹಾಕಿದರು.




## ಮೆಲೋನಿ-ಮೋದಿ ತಮಾಷೆ

ಜಾಗತಿಕವಾಗಿ ಸದಾ ಸದ್ದು ಮಾಡುವ ಪ್ರಧಾನಿ ನರೇಂದ್ರ ಮೋದಿ ಮತ್ತು ಜಾರ್ಜಿಯಾ ಮೆಲೋನಿ ಅವರ 'ಮೆಲೋಡಿ' ಜುಗಲ್ ಬಂದಿ ಜಿ7 ಶೃಂಗಸಭೆಯಲ್ಲೂ ಮುಂದುವರಿದಿದೆ. ಗ್ರೂಪ್ ಫೋಟೋಗೂ ಮುನ್ನ ಮೋದಿ ಅವರನ್ನು ಬರಮಾಡಿಕೊಂಡ ಮೆಲೋನಿ, ನಿಮ್ಮನ್ನು ಮತ್ತೆ ಭೇಟಿಯಾಗಿದ್ದು ಸಂತೋಷ ತಂದಿದೆ'' ಎಂದಿದ್ದಾರೆ. ಅದಕ್ಕೆ ಪ್ರಧಾನಿ ಮೋದಿ ಅವರು ನಗುತ್ತಾ 'ಇನ್ ಸ್ಟಾಗ್ರಾಮ್ ಎಂದು ಪ್ರಸ್ತಾಪಿಸಿದಾಗ, ಮೆಲೋನಿ ತಕ್ಷಣವೇ, ''ಹೌದು, ನಾವಿಬ್ಬರೂ ಇನ್‌ಸ್ಟಾಗ್ರಾಮ್‌ನಲ್ಲಿ ಅತ್ಯಂತ ಜನಪ್ರಿಯ ಜೋಡಿ ಎಂದು ಉತ್ತರಿಸಿ ನಕ್ಕಿದ್ದಾರೆ.

ಪ್ರಸ್ತುತ ಉತ್ತರ ಅಮೆರಿಕದಲ್ಲಿ ನಡೆಯುತ್ತಿರುವ ಫಿಫಾ ವಿಶ್ವಕಪ್ ಕುರಿತು ಕೂಡ ಜಾಗತಿಕ ನಾಯಕರು ಮುಕ್ತವಾಗಿ ಹರಟೆ ಹೊಡೆದಿದ್ದಾರೆ. ಫ್ರಾನ್ಸ್ ತಂಡದ ಬೆಂಬಲದ ಘೋಷಣೆಗಳು ಕೇಳಿಬಂದರೆ, ಸ್ಪೇನ್ ವಿರುದ್ಧ ಕೇಪ್ ವರ್ಡೆ ತಂಡ 0-0 ಗೋಲುಗಳಿಂದ ಪಂದ್ಯ ಡ್ರಾ ಮಾಡಿಕೊಂಡಿದ್ದನ್ನು ಬ್ರಿಟನ್ ಪ್ರಧಾನಿ ಸ್ಟಾರ್ಮರ್ ಆಶ್ಚರ್ಯದಿಂದ ನೆನಪಿಸಿಕೊಂಡಿದ್ದಾರೆ. ಮತ್ತೊಂದೆಡೆ, ಟ್ರಂಪ್ ಅವರು ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷರಾದ ಆಂಟೋನಿಯೊ ಕೋಸ್ಟಾ ಅವರೊಂದಿಗೆ ಮಾತನಾಡುತ್ತಾ, ಡೆನ್ಮಾರ್ಕ್ ಅಡಿಯಲ್ಲಿರುವ ಸ್ವಾಯತ್ತ ಪ್ರದೇಶವಾದ 'ಗ್ರೀನ್ ಲ್ಯಾಂಡ್' ಅನ್ನು ಅಮೆರಿಕ ವಶಪಡಿಸಿಕೊಳ್ಳುವ ಹಳೆಯ ವಿವಾದಾತ್ಮಕ ವಿಷಯವನ್ನು ಮತ್ತೆ ರಹಸ್ಯವಾಗಿ ಪ್ರಸ್ತಾಪಿಸಿ ಕುತೂಹಲ ಮೂಡಿಸಿದ್ದಾರೆ.

## ಜಗತ್ತಿಗೆ ಕಾಡುತ್ತಿದೆ ವಿಶ್ವಾಸದ ಕೊರತೆ



ಶೃಂಗಸಭೆಯ ಹೊಸ ಪಾಲುದಾರಿಕೆಗಳನ್ನು ರೂಪಿಸುವುದು ಮತ್ತು ಅಂತಾರಾಷ್ಟ್ರೀಯ ಒಗ್ಗಟ್ಟನ್ನು ಮರುನಿರ್ಮಾಣ ಮಾಡುವುದು ಎಂಬ ವಿಷಯದ ಮೇಲಿನ ಔಟ್‌ರೀಚ್ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ ಅವರು ಅಂತಾರಾಷ್ಟ್ರೀಯ ಸಂಬಂಧಗಳಲ್ಲಿನ ವಿಶ್ವಾಸದ ಕೊರತೆಯ ಬಗ್ಗೆ ತೀಕ್ಷ್ಣವಾಗಿ ಉಲ್ಲೇಖಿಸಿದರು. ಜಗತ್ತು ಸಂಪನ್ಮೂಲಗಳ ಕೊರತೆಯಿಂದ ಬಳಲುತ್ತಿಲ್ಲ ಬದಲಿಗೆ ದೇಶಗಳ ನಡುವಿನ ವಿಶ್ವಾಸದ ಕೊರತೆಯಿಂದ ತತ್ತರಿಸುತ್ತಿದೆ.

ನಮ್ಮ ಭವಿಷ್ಯದ ಪಾಲುದಾರಿಕೆಗಳ ಯಶಸ್ಸು ಈ ವಿಶ್ವಾಸವನ್ನು ಮರುನಿರ್ಮಾಣ ಮಾಡುವುದರ ಮೇಲೆಯೇ ಆಧಾರಿತವಾಗಿದೆ ಎಂದು ಪ್ರತಿಪಾದಿಸಿದರು. ಇಂಧನ, ಆಹಾರ ಭದ್ರತೆ, ತಂತ್ರಜ್ಞಾನ ಮತ್ತು ಆರ್ಥಿಕ ಸ್ಥಿರತೆಯಂತಹ ಪರಸ್ಪರ ಸಂಬಂಧಿತ ಸವಾಲುಗಳನ್ನು ಜಗತ್ತು ಎದುರಿಸುತ್ತಿದ್ದರೂ ಸಂಕುಚಿತ ರಾಷ್ಟ್ರೀಯ ಹಿತಾಸಕ್ತಿಗಳಿಂದಾಗಿ ಜಾಗತಿಕ ಸಹಕಾರಕ್ಕೆ ಹಿನ್ನಡೆಯಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

## ವಿಧಾನಪರಿಷತ್‌ನ ಏಳು ಸ್ಥಾನಗಳಿಗೆ ಇಂದು ಚುನಾವಣೆ ಸಿದ್ಧತೆ

• ಉದಯವಾಹಿನಿ,ಬೆಂಗಳೂರು

ವಿಧಾನಪರಿಷತ್ ಸದಸ್ಯ ಸ್ಥಾನಕ್ಕೆ ತೆರವಾಗಿರುವ ಏಳು ಸ್ಥಾನಗಳಿಗೆ ಇಂದು ಚುನಾವಣೆ ನಡೆಯಲಿದ್ದು, ಅಂತಿಮ ಹಂತದ ಸಿದ್ಧತೆ ಕೈಗೊಳ್ಳಲಾಗಿದೆ. ವಿಧಾನಸೌಧದ ಮೊದಲ ಮಹಡಿಯಲ್ಲಿರುವ ಸಮಿತಿ ಸಭೆ ಕೊಠಡಿಯಲ್ಲಿ ಗುರುವಾರ ಬೆಳಗ್ಗೆ 9ರಿಂದ ಸಂಜೆ 5ರವರೆಗೆ ಮತದಾನ ನಡೆಯಲಿದೆ. ಇಂದು ನಡೆಯುವ ಚುನಾವಣೆ ಹಿನ್ನೆಲೆಯಲ್ಲಿ ಸಕಲ ರೀತಿಯ ಸಿದ್ಧತೆಗಳನ್ನ ಕೈಗೊಳ್ಳಲಾಗುತ್ತಿದೆ. ಸಮಿತಿ ಸಭೆಯ ಒಳಗೆ ಹಾಗೂ ಹೊರಗೆ ಸಿಸಿಟಿವಿ ಅಳವಡಿಸಲಾಗಿದೆ. ಶಾಸಕರ ಗೌಪ್ಯ ಮತದಾನಕ್ಕೆ ಎರಡು ಮತಗಟ್ಟೆಗಳನ್ನ ಸ್ಥಾಪಿಸಲಾಗಿದೆ. ಸುಗಮ ಮತದಾನಕ್ಕೆ ಅಗತ್ಯ ತಯಾರಿಗಳನ್ನ ಮಾಡಿಕೊಳ್ಳಲಾಗುತ್ತಿದೆ. ಪೊಲೀಸರು ಭದ್ರತೆಗಾಗಿ ನಿಯೋಜಿಸಲಾಗಿದೆ.

ಮತ್ತೊಂದೆಡೆ ವಂಡರ್ ಲಾ ರೆಸಾರ್ಟ್‌ನಲ್ಲಿ ಬೀಡುಬಿಟ್ಟಿರುವ ಕೈ ಶಾಸಕರಿಗೆ ಸಿಎಂ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ಪರಿಷತ್ ಮತದಾನದ ಅಣಕು ಪ್ರಕ್ರಿಯೆ ನಡೆಸಲಾಯಿತು.

## ಎರಡನೇ ಪಟ್ಟಿಯಲ್ಲಿ ನನಗೆ ಸಚಿವ ಸ್ಥಾನ ಸಿಗುವ ವಿಶ್ವಾಸವಿದೆ, ಸಿಗದಿದ್ದರೂ ಬೇಜಾರಿಲ್ಲ

• ಉದಯವಾಹಿನಿ, ಬೆಂಗಳೂರು

ಸಚಿವ ಸಂಪುಟ ವಿಸ್ತರಣೆ ಚರ್ಚೆಯ ಬೆಳವಣಿಗೆ ಮಧ್ಯೆ, ಮಾಜಿ ಸಂಸದ ಡಿ.ಕೆ.ಸುರೇಶ್ ಅವರನ್ನ ಮಾಜಿ ಸಚಿವ ಜಮೀರ್ ಅಹ್ಮದ್ ಭೇಟಿಯಾಗಿ ಕೆಲ ಹೊತ್ತು ಚರ್ಚೆ ನಡೆಸಿದರು.

ಭೇಟಿ ಬಳಿಕ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಜಮೀರ್, ನಮ್ಮದು ಹೈಕಮಾಂಡ್ ಪಕ್ಷ. ಎಲ್ಲವೂ ಹೈಕಮಾಂಡ್ ತೀರ್ಮಾನ ಮಾಡಲಿದೆ. ಮೊದಲ ಪಟ್ಟಿಯಲ್ಲಿ ಸಚಿವ ಸ್ಥಾನ ಸಿಗುತ್ತೆ ಎಂದು ನಿರೀಕ್ಷೆಯಲ್ಲಿದ್ದ ಆದರೆ, ಬರಲಿಲ್ಲ. ಎರಡನೇ ಪಟ್ಟಿಯಲ್ಲಿ ಬರಬಹುದು ಎಂಬ ವಿಶ್ವಾಸವಿದೆ. ಬರದಿದ್ದರೂ ಬೇಜಾರಿಲ್ಲ. ನಾನು ಎಲ್ಲೂ ಬಹಿರಂಗವಾಗಿ ಮಾಧ್ಯಮಗಳ ಮುಂದೆ ಕೇಳಿಲ್ಲ. ನನ್ನ ಅಭಿಮಾನಿಗಳು ಪ್ರತಿಭಟನೆ ಮಾಡಿದ್ದಾರೆ. ಅವರ ನೆಚ್ಚಿನ ನಾಯಕನನ್ನ ಮಂತ್ರಿ ಮಾಡಿ ಎಂಬುದು ಕೇಳುವುದು ಸಹಜ ಎಂದರು. ಸಚಿವ ಸ್ಥಾನ ಸಿಗರದಿರುವುದಕ್ಕೆ ಬೇಸರ ಇಲ್ಲ. ನನ್ನ ಮುಖದಲ್ಲಿ ಬೇಸರ ಕಾಣಿಸುತ್ತಿದೆಯಾ?. ನಾನು ಹೈಕಮಾಂಡ್‌ಗೆ ಕ್ಲೋಸ್ ಇದ್ದೀನಿ. ಕೇರಳ, ತೆಲಂಗಾಣ ಚುನಾವಣೆಗಳಲ್ಲಿ ಪ್ರಚಾರ ಮಾಡಿದ್ದೇನೆ ಎಂದರು. ಪರಿಷತ್ ಚುನಾವಣೆ ವಿಚಾರವಾಗಿ ಮಾತನಾಡಿ, ನಿನ್ನೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಗೆ ಹೋಗಿದ್ದೆ, 140 ಜನ ಶಾಸಕರು ಕೂಡ ಒಗ್ಗಟ್ಟಾಗಿದ್ದೇವೆ. 28 ಜನ ಒಬ್ಬ ಅಭ್ಯರ್ಥಿಗೆ ಮತ ಹಾಕಿದರೂ ಕೂಡ ಗೆಲ್ಲುತ್ತೇವೆ. ನಮಗೆ ಹೆಚ್ಚುವರಿ ಮತ ಬೇಡ ಎಂದರು. ಜೆಡಿಎಸ್ ಶಾಸಕರನ್ನ ಸಂಪರ್ಕ ಮಾಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿ, ನಮಗೆ ಅದರ ಅಗತ್ಯ ಇಲ್ಲ.

## ರಾಜ್ಯ ಸಾರಿಗೆ ಇಲಾಖೆಯಲ್ಲಿ ಶೇ.50ಕ್ಕಿಂತ ಹೆಚ್ಚು ಹುದ್ದೆಗಳು ಖಾಲಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸಾರಿಗೆ ಇಲಾಖೆಯಲ್ಲಿ ಶೇ.50ಕ್ಕಿಂತಲೂ ಹೆಚ್ಚಿನ ಹುದ್ದೆಗಳು ಖಾಲಿಯಿರುವುದರಿಂದ ದಿನನಿತ್ಯದ ಸಾರಿಗೆ ಇಲಾಖೆಯ ದೈನಂದಿನ ಚಟುವಟಿಕೆಗಳಿಗೆ ತೀವ್ರ ಅಡಚಣೆಯಾಗುತ್ತಿದ್ದು, ಬಾಕಿ ಹುದ್ದೆಗಳ ಭರ್ತಿಗೆ ನೂತನ ಸಚಿವರಿಗೆ ಸವಾಲಾಗಿದೆ. ಹಿಂದೆ ಸಾರಿಗೆ ಸಚಿವರಾಗಿದ್ದ ರಾಮಲಿಂಗಾರೆಡ್ಡಿ ಬಾಕಿ ಹುದ್ದೆಗಳ ಭರ್ತಿಗೆ ಸಾಕಷ್ಟು ಪ್ರಯತ್ನ ಮಾಡಿದ್ದರು. ಆದರೆ ಒಳಮೀಸಲಾತಿಯ ಕಾರಣಕ್ಕಾಗಿ ಅದು ಸಾಧ್ಯವಾಗಲಿಲ್ಲ. ಸಾರಿಗೆ ಇಲಾಖೆಯ ಆಡಳಿತ ಮತ್ತು ಕಾರ್ಯಾಂಗಕ್ಕೆ ಒಟ್ಟು 2800 ಹುದ್ದೆಗಳು ಮಂಜೂರಾಗಿವೆ. ಅವುಗಳ ಪೈಕಿ 1541 ಹುದ್ದೆಗಳು ಖಾಲಿಯಿದ್ದು, ಶೇಕಡವಾರು 45 ರಷ್ಟು ಸಿಬ್ಬಂದಿಗಳ ಕೊರತೆಯಿದೆ. ಈಗ ಒಳಮೀಸಲಾತಿಯ ವಿವಾದ ಬಗೆಹರಿದಿರುವುದರಿಂದ ನೇಮಕಾತಿ ಪ್ರಕ್ರಿಯೆಗಳನ್ನು ಆರಂಭಿಸುತ್ತಿರುವುದಾಗಿ ಸಾರಿಗೆ ಇಲಾಖೆ ತಿಳಿಸಿದೆ.

ಆದರೆ ಆರ್ಥಿಕ ಇಲಾಖೆಯ ಅನುಮೋದನೆ ಸಿಕ್ಕಿರುವುದು ಬೆರಳೆಣಿಕೆಯ ಹುದ್ದೆಗಳಿಗಷ್ಟೆ. ಅನುಮೋದಿತ ಹುದ್ದೆಗಳು ನೇಮಕವಾದರೂ ಕೂಡ ಸಾರಿಗೆ ಇಲಾಖೆಯ ಕಾರ್ಯನಿರ್ವಹಣೆ ಚುರುಕು ಪಡೆಯಲು ಸಾಧ್ಯವಿಲ್ಲ. ಭಾರೀ ಸಂಖ್ಯೆಯಲ್ಲಿ ಸಿಬ್ಬಂದಿಗಳ ಕೊರತೆಯನ್ನು ಅನುಭವಿಸುತ್ತಿರುವ ಸಾರಿಗೆ ಇಲಾಖೆಯ ಕಾರ್ಯನಿರ್ವಹಣೆಯಲ್ಲಿ ನಿಧಾನಗತಿಗೆ ದಿನನಿತ್ಯ ಜನಸಾಮಾನ್ಯರು ಇಡೀ ಶಾಪ ಹಾಕುತ್ತಿದ್ದಾರೆ.

## ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ: 231 ಜನರಿಗೆ ದಂಡ, 24 ಪ್ರಕರಣ ದಾಖಲು

• ಉದಯವಾಹಿನಿ,ಬೆಂಗಳೂರು

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವ ಮೂಲಕ ನಿಯಮ ಉಲ್ಲಂಘಿಸುವವರಿಗೆ ಬೆಂಗಳೂರು ಉತ್ತರ ವಿಭಾಗದ ಪೊಲೀಸರು ಬಿಸಿ ಮುಟ್ಟಿಸಿದ್ದಾರೆ. ಉತ್ತರ ವಿಭಾಗದ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿರುವ ಪೊಲೀಸರು, ಒಟ್ಟು 231 ಜನರಿಗೆ ದಂಡ ವಿಧಿಸಿ, 24 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದಾರೆ.

ಉತ್ತರ ವಿಭಾಗದ ಡಿಸಿಪಿ ಬಿ.ಎಸ್ ನೇಮಗೌಡ ಅವರ ನೇತೃತ್ವದಲ್ಲಿ ಉತ್ತರ ವಿಭಾಗದ ಒಟ್ಟು 13 ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಸಿಬ್ಬಂದಿ ಒಟ್ಟಾಗಿ ದಾಳಿ ನಡೆಸಿದ್ದಾರೆ. ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುತ್ತಿದ್ದ 231 ಜನರಿಗೆ ಸ್ಥಳದಲ್ಲೇ ದಂಡ ವಿಧಿಸಲಾಗಿದೆ. ಅಂಗಡಿಗಳ ಪ್ರವೇಶ ದ್ವಾರದಲ್ಲಿ ನಿಯಮ ಬಾಹಿರವಾಗಿ ಸಿಗರೇಟು, ಬೀಡಿಗಳ ಜಾಹೀರಾತು ಹಾಕಿದ್ದವರ ವಿರುದ್ಧ ಕೋಟ್ಪಾ ಕಾಯ್ದೆ ಉಲ್ಲಂಘನೆಯ ಆರೋಪದಡಿ 24 ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

## ಮಾವಿಗೆ ಬೆಂಬಲ ಬೆಲೆ ಕೋರಿ ಕೇಂದ್ರ ಕೃಷಿ ಸಚಿವರಿಗೆ ಪತ್ರ

• ಉದಯವಾಹಿನಿ, ಬೆಂಗಳೂರು

ಬೆಲೆ ಕುಸಿತದಿಂದ ಕಂಗೆಟ್ಟಿರುವ ರಾಜ್ಯದ ಮಾವು ಬೆಳೆಗಾರರ ನೆರವಿಗೆ ಧಾವಿಸುವಂತೆ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಲ್ಲಿ ಮನವಿ ಮಾಡಿದ್ದಾರೆ.

ಈ ಬಗ್ಗೆ ಕೃಷಿ ಸಚಿವರಿಗೆ ಪತ್ರವನ್ನು ಬರೆದು, ರೈತರ ಸಂಕಷ್ಟದ ಬಗ್ಗೆ ಚರ್ಚೆ ನಡೆಸಿದ ಸಚಿವ ಕುಮಾರಸ್ವಾಮಿ ಅವರು, 2026-27ರ ಋತುವಿನಲ್ಲಿ ರೈತರು ಎದುರಿಸುತ್ತಿರುವ ಬೆಲೆ ಕುಸಿತ ಸಂಕಷ್ಟವನ್ನು ತಗ್ಗಿಸಲು ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆ (ಎಂಐಎಸ್) ಮೂಲಕ ನೆರವಾಗಬೇಕು ಹಾಗೂ ಬೆಲೆ ಕೊರತೆ ಪಾವತಿ ಯೋಜನೆ (ಪಿಡಿಪಿಎಸ್) ಅಡಿಯಲ್ಲಿ ಬೆಂಬಲ ಬೆಲೆ ನೀಡಬೇಕು ಎಂದು ಕೇಂದ್ರ ಕೃಷಿ ಸಚಿವರನ್ನು ವಿನಂತಿಸಿದ್ದಾರೆ.

ಮಾರುಕಟ್ಟೆ ಬೆಲೆ ಕುಸಿತ ಮತ್ತು ಹೆಚ್ಚುತ್ತಿರುವ ಕೃಷಿ ವೆಚ್ಚಗಳಿಂದಾಗಿ ಮಾವು ಬೆಳೆಗಾರರು ಎದುರಿಸುತ್ತಿರುವ ಸವಾಲುಗಳನ್ನು ತಮ್ಮ ಪತ್ರದಲ್ಲಿ ಕೃಷಿ ಸಚಿವರ ಗಮನಕ್ಕೆ ತಂದಿರುವ ಸಚಿವ ಕುಮಾರಸ್ವಾಮಿ ಅವರು, ರೈತರು ಮತ್ತು ತೋಟಗಾರಿಕೆ ವಲಯದ ಹಿತಾಸಕ್ತಿಯ ದೃಷ್ಟಿಯಿಂದ ಈ ವಿಷಯವನ್ನು ಸಹಾನುಭೂತಿಯಿಂದ ಪರಿಗಣಿಸುವಂತೆ ಕೋರಿದ್ದಾರೆ.



ಕರ್ನಾಟಕವು ಅತಿಹೆಚ್ಚು ಮಾವು ಬೆಳೆಯುವ ಪ್ರಮುಖ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯದಲ್ಲಿ ಸುಮಾರು 1.45 ಲಕ್ಷ ಹೆಕ್ಟೇರ್‌ಗಳಲ್ಲಿ ಮಾವು ಕೃಷಿ ಮಾಡಲಾಗುತ್ತಿದ್ದು, ಪ್ರಸಕ್ತ ಋತುವಿನಲ್ಲಿ ಸುಮಾರು 10 ಲಕ್ಷ ಮೆಟ್ರಿಕ್ ಟನ್ ಮಾವು ಬೆಳೆಯಲಾಗಿದೆ. ಆದರೆ, ಬೆಲೆ ಕುಸಿತ ಹಾಗೂ ಪ್ರತಿಕೂಲಕರ ಹವಾಮಾನದಿಂದ ರೈತರು ಸಂಕಷ್ಟಕ್ಕೆ ತುತ್ತಾಗಿದ್ದಾರೆ ಎಂದು ಹೆಚ್‌ಡಿಕೆ ಕೃಷಿ ಸಚಿವರ ಗಮನ ಸೆಳೆದಿದ್ದಾರೆ.ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಬೆಂಗಳೂರು ಗ್ರಾಮಾಂತರ, ಧಾರವಾಡ, ತುಮಕೂರು ಮತ್ತು ಹಾವೇರಿಯಂತಹ ಜಿಲ್ಲೆಗಳಲ್ಲಿ ಸಾವಿರಾರು ರೈತ ಕುಟುಂಬಗಳು ಮಾವು ಕೃಷಿಯನ್ನು ಅವಲಂಬಿಸಿದೆ. ಇದು ಅತ್ಯಂತ ಪ್ರಮುಖ ವಾಣಿಜ್ಯ ತೋಟಗಾರಿಕಾ ಬೆಳೆಯಾಗಿದೆ.

## ಸಚಿವ ಸಂಪುಟ ವಿಸ್ತರಣೆ : ಮುಂದಿನ ವಾರ ಸಿಎಂ ಡಿಕೆಶಿ ದೆಹಲಿಗೆ

• ಉದಯವಾಹಿನಿ, ಬೆಂಗಳೂರು

ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಹೈಕಮಾಂಡ್ ಬಳಿ ಚರ್ಚಿಸಿ ಅನುಮತಿ ಪಡೆಯಲು ಮುಂದಿನ ವಾರ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಗೆ ತೆರಳಲಿದ್ದಾರೆ. ಸಂಪುಟ ಸೇರ್ಪಡೆಗೊಳ್ಳಲು ಶಾಸಕರಿಂದ ತೀವ್ರ ಒತ್ತಡ ಹಾಗೂ ಬೇಡಿಕೆ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಇದೇ ತಿಂಗಳಲ್ಲಿ ಮೊದಲ ಹಂತದಲ್ಲಿ ಸಂಪುಟ ವಿಸ್ತರಣೆ ಮಾಡಲು ಮುಖ್ಯಮಂತ್ರಿ ಉದ್ದೇಶಿಸಿದ್ದಾರೆ. ಹೀಗಾಗಿ ಮುಖ್ಯಮಂತ್ರಿ ಅವರೊಂದಿಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಮುಂದಿನ ಸೋಮವಾರ ಇಲ್ಲವೆ ಮಂಗಳವಾರ ದೆಹಲಿಗೆ ತೆರಳಿ ಹೈಕಮಾಂಡ್ ಜೊತೆ ಸಮಾಲೋಚನೆ ನಡೆಸಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ವಿಧಾನ ಪರಿಷತ್ತಿನ ಚುನಾವಣೆಯ ಜೊತೆಗೆ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಹಾಗೂ ಸಂಪುಟ ವಿಸ್ತರಣೆ ವಿಚಾರ ಪ್ರಸ್ತಾಪವಾಗಿದೆ. ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳಲು ಕೇವಲ 20 ಶಾಸಕರಿಗೆ ಮಾತ್ರ ಅವಕಾಶವಿದ್ದು, ಉಳಿದವರಿಗೆ ನಿಗಮ-ಮಂಡಳಿಯಲ್ಲಿ ಅವಕಾಶ ಮಾಡಿಕೊಡುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ ಎಂದು ಮೂಲಗಳು ಹೇಳಿವೆ. ಮೊದಲ ಬಾರಿಗೆ ಶಾಸಕರಾದವರಿಗೆ ಸಂಪುಟದಲ್ಲಿ ಅವಕಾಶವಿಲ್ಲ. ಪ್ರಾತಿನಿಧ್ಯ ಸಿಗದ ಪ್ರದೇಶ, ಜಾತಿ, ವರ್ಗಗಳಿಗೆ ಸಂಪುಟ ವಿಸ್ತರಣೆ ಸಂದರ್ಭದಲ್ಲಿ ಆದ್ಯತೆ ನೀಡಲಾಗುವುದು.



ಅರ್ಹತೆ, ಹಿರಿತನ, ಅನುಭವವನ್ನು ಪರಿಗಣಿಸಲಾಗುವುದು. ಎಲ್ಲರಿಗೂ ಅವಕಾಶ ಸಿಗುವುದಿಲ್ಲ ಎಂಬುದು ನಿಮಗೂ ಗೊತ್ತಿದೆ. ಸಚಿವ ಸ್ಥಾನ ಸಿಗದ ಶಾಸಕರಿಗೆ ಅವರ ಹಿರಿತನ ಮತ್ತು ಅನುಭವದ ಆಧಾರದ ಮೇಲೆ ಪ್ರಮುಖ ನಿಗಮ-ಮಂಡಳಿಗಳ ಅಧ್ಯಕ್ಷ ಸ್ಥಾನ ನೀಡಲಾಗುವುದು. ಅವಕಾಶ ವಂಚಿತರು ಅಸಮಾಧಾನಗೊಳ್ಳಬಾರದು ಎಂದು ಮುಖ್ಯಮಂತ್ರಿ ಹೇಳಿದ್ದಾರೆ ಎನ್ನಲಾಗಿದೆ.

ನ ಮುಂದೆ ಹಲವು ಸವಾಲುಗಳಿದ್ದು, ಒಗ್ಗಟ್ಟಿನಿಂದ ಸರ್ಕಾರವನ್ನು ಮುನ್ನಡೆಸೋಣ.ಎಸ್‌ಐಆರ್ ವಿಚಾರದಲ್ಲಿ ಜಾಗೃತರಾಗಿ ಅರ್ಹ ಮತದಾರರು ಪಟ್ಟಿಯಿಂದ ಬಿಟ್ಟುಹೋಗದಂತೆ ಎಚ್ಚರ ವಹಿಸಿ. ಮುಂದಿನ ವಿಧಾನಸಭೆ ಚುನಾವಣೆಯಲ್ಲೂ ಪಕ್ಷವನ್ನು ಅಧಿಕಾರಕ್ಕೆ ತರಬೇಕೆಂಬ ಉದ್ದೇಶವಿಟ್ಟುಕೊಂಡು ನಿಮ ಕ್ಷೇತ್ರಗಳಲ್ಲಿ ಕೆಲಸ ಮಾಡಿ. ಅನುದಾನ ಹಂಚಿಕೆಯಲ್ಲಿ ಅಸಮಾಧಾನವಾಗದಂತೆ ಗಮನ ಹರಿಸಲಾಗುವುದು. ಎಲ್ಲರನ್ನೂ ಸಮಾನ ದೃಷ್ಟಿಯಲ್ಲಿ ಪರಿಗಣಿಸುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇಲ್ಲ : ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ರಿಯಲ್ ಎಸ್ಟೇಟ್ ನಡೆಸುವುದೇ ಪ್ರಮುಖ ಆದ್ಯತೆಯಾಗಿದೆ ಹೊರತು ರೈತರ ಹಿತ ಬೇಕಾಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಕೆಲವೇ ಗಂಟೆಗಳಲ್ಲಿ ತಮ ಸರ್ಕಾರದ ಆದ್ಯತೆ ರಿಯಲ್ ಎಸ್ಟೇಟ್ ಎಂಬುದನ್ನು ತೋರಿಸಿದ್ದಾರೆ. ಬಿಡದಿಯಲ್ಲಿ ಟೌನ್‌ಶಿಪ್ ಮಾಡಲು ಮುಂದಾಗಿರುವ ಸರ್ಕಾರ ಬಲವಂತವಾಗಿ ರೈತರ ಜಮೀನು ಕಸಿಯಲು ಮುಂದಾಗಿದ್ದಾರೆ. ಇದನ್ನು ಬಿಜೆಪಿ ವಿರೋಧಿಸಲಿದೆ ಎಂದರು. ಅನ್ನದಾತರಿಗೆ ಈ ಸರ್ಕಾರ ನೆರವಾಗಬೇಕಿತ್ತು. ಆದರೆ ದುರದೃಷ್ಟವೆಂದರೆ ಬೆಂಗಳೂರಿನ ರಿಯಲ್ ಎಸ್ಟೇಟ್ ಸರ್ಕಾರಕ್ಕೆ ಮುಖ್ಯವಾಗಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಭಂಡತನ ಬಿಟ್ಟು ರೈತರ ಸಮಸ್ಯೆಗಳನ್ನು ಆಲಿಸಬೇಕು. ಅವರನ್ನು ಒಕ್ಕಲೆಬ್ಬಿಸಬಾರದು. ಟೌನ್‌ಶಿಪ್‌ಗಾಗಿ ಭೂಸ್ವಾಧೀನವನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು. ನನ್ನ ವಿರುದ್ಧ ಬಿಜೆಪಿ ನಾಯಕರ ವಿರುದ್ಧ,




ವಿರೋಧಪಕ್ಷದ ನಾಯಕರ ವಿರುದ್ಧ ಪೋಸ್ಟರ್ ಆಂದೋಲನ ನಡೆಸಲಾಗುತ್ತಿದೆ. ನಿಮ ಗೊಡ್ಡು ಬೆದರಿಕೆ ಹೆದರಲು ನಾವು ಕಾಂಗ್ರೆಸ್ ಶಾಸಕರಲ್ಲ. ಈ ನಾಡಿನ ರೈತರ ಪರವಾಗಿ ನಿಲ್ಲುವ ಕರ್ತವ್ಯ ನಮದು. ಅದನ್ನು ಮಾಡೇ ಮಾಡುತ್ತೇವೆ. ವಿರೋಧ ಪಕ್ಷದ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸುತ್ತೇವೆ ಎಂದರು. ಗ್ಯಾರಂಟಿಗಳಲ್ಲಿ ಅಕ್ರಮ ಆಗೋವರೆಗೆ ಅನುಷ್ಠಾನ ಸಮಿತಿಗಳು ಕತ್ತೆ ಕಾಯುತ್ತಿದ್ದವೇ. ಒಂದೂವರೆ ಲಕ್ಷಕ್ಕೂ ಹೆಚ್ಚು ಜನರು ಆದಾಯ ತೆರಿಗೆ ಪಾವತಿ ಮಾಡುವವರು ಗೃಹ ಲಕ್ಷ್ಮಿ ಪಡೆಯುತ್ತಿದ್ದಾರೆ ಎಂದು ಅನುಷ್ಠಾನ ಸಮಿತಿ ಹೇಳಿದೆ. ಗ್ಯಾರಂಟಿ ಜಾರಿ ಮಾಡುವಾಗ ಕಾಕಾ ಪಾಟೀಲ್, ಮಹಾದೇವಪ್ಪಗೆ ಫ್ರೀ ಎಂದಿದ್ದರು. ಈಗ ಹೇಗೆ ಅವರೆಲ್ಲ ತೆರಿಗೆ ಪಾವತಿದಾರರಾಗುತ್ತಾರೆ ಎಂದು ಪ್ರಶ್ನೆ ಮಾಡಿದರು.ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷರಿಗೆ ಸಚಿವ ಸಂಪುಟ ದರ್ಜೆ ನೀಡಲಾಗಿದೆ. ಜಿಲ್ಲೆಯಲ್ಲಿ ಅಧ್ಯಕ್ಷರಿದ್ದಾರೆ. ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅನುಷ್ಠಾನ ಸಮಿತಿ ಇದೆ. ಇವರೆಲ್ಲ ಕತ್ತೆ ಕಾಯುತ್ತಿದ್ದಾರೆಯೇ ಎಂದು ವ್ಯಂಗ್ಯವಾಡಿದರು. ಗ್ಯಾರಂಟಿಗಳಿಂದ ಸರ್ಕಾರಕ್ಕೆ ಈಗ ಹೊರೆ ಆಗ್ತಾ ಇದೆ. ಸಮಿತಿಗಳಿಗೆ, ಅಧ್ಯಕ್ಷರಿಗೆ ಕಚೇರಿ, ವೇತನ, ಇತರ ಸೌಲಭ್ಯಗಳಿಗೆ ನೂರಾರು ಕೋಟಿ ವ್ಯಯಿಸಲಾಗುತ್ತಿದೆ. ಇದು ಸರ್ಕಾರದ ವೈಫಲ್ಯ. ಗ್ಯಾರಂಟಿಗಳಿಗೆ ಹಣ ಹೊಂದಿಸಲು ಸಾಧ್ಯವಾಗದೇ ಒಂದೊಂದೆ ನೆಪ ಹೇಳಿಕೊಂಡು ಈಗ ಸೌಲಭ್ಯಗಳಿಗೆ ಕತ್ತರಿ ಹಾಕ್ತ ಇದ್ದಾರೆ. ಇದಕ್ಕೆ ರಾಜ್ಯದ ಜನ ಛೀಮಾರಿ ಹಾಕ್ತ ಇದ್ದಾರೆ ಎಂದರು. ರಾಜ್ಯ ಸರ್ಕಾರವೇ ಎಸ್‌ಐಆರ್ ವಿಚಾರದಲ್ಲಿ ದ್ವಂದ್ವ ನಿಲುವು ತೋರಿಸುತ್ತಿದೆ. ಅಧಿಕಾರಿಗಳನ್ನು ಎತ್ತಿಕಟ್ಟುವ ಕೆಲಸ ಮಾಡಲಾಗುತ್ತಿದೆ. ಬಿಎಲ್ ಒಗಳಿಗೆ ರಾಜ್ಯ ಸರ್ಕಾರ ಕುಮಕ್ಕು ನೀಡುತ್ತಿದೆ ಎಂದು ದೂರಿದರು. ಕಾಂಗ್ರೆಸ್‌ನ ಮಹಾನ್ ನಾಯಕ ರಾಹುಲ್ ಗಾಂಧಿ ಅವರು ಬೇರೆ ದೇಶ ನೈಜ ಪೌರತ್ವ ಪಡೆದಿದ್ದಾರೆ. ಇನ್ನೊಂದು ದೇಶದ ಪೌರತ್ವ ಇಟ್ಟುಕೊಂಡು ಅಕ್ರಮವಾಗಿ ಸುಳ್ಳು ಮಾಹಿತಿ ನೀಡಿದ್ದಾರೆ. ಇದರ ಬಗ್ಗೆ, ಡಿ.ಕೆ. ಶಿವಕುಮಾರ್ ಹಾಗೂ ಪ್ರಿಯಾಂಕ್ ಖರ್ಗೆ ಅವರು ಬೆಳಕು ಚೆಲ್ಲುವ ಕೆಲಸವನ್ನು ಮಾಡಲಿ ಎಂದರು.


ರಾಜ್ಯ ಸರ್ಕಾರ ಸುಧಾರಣೆಗಳನ್ನು ಮಾಡಲಿ, ಗ್ಯಾರಂಟಿಗಳಿಗೆ ಹಣ ಹೊಂದಿಸಲು ಫಲಾನುಭವಿಗಳಿಗೆ ಕತ್ತರಿ ಹಾಕುತ್ತಿದ್ದೇವೆ ಎಂಬ ಸತ್ಯವನ್ನು ಜನರ ಮುಂದೆ ಮುಚ್ಚಿಡಲಿ. ಈ ಸರ್ಕಾರದ ಯೋಗ್ಯತೆಗೆ ಮೂರು ವರ್ಷದಲ್ಲಿ ಜನರಿಗೆ ಮನೆ ನೀಡಲಿಲ್ಲ. ರೈತರ ಸಂಕಷ್ಟಕ್ಕೆ ಸ್ಪಂದಿಸಲಿಲ್ಲ, ಗಂಗಾ ಕಲ್ಯಾಣ ಅಕ್ರಮ ತನಿಖೆ ಮಾಡಲಿಲ್ಲ. ಹೈನುಗಾರಿಕೆಗೆ ಪ್ರೋತ್ಸಾಹ ಧನ ನೀಡಲಿಲ್ಲ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 110.93 ₹/L ಡೀಸೆಲ್ : 99.80₹/L ಬಂಗಾರ: ₹ 15,110/Gram 24ct ₹13,332/Gram 22ct ಬೆಳ್ಳಿ: ₹260.00/Gram

# ದಲಿತರ ಮೇಲೆ ದೌರ್ಜನ್ಯ ಎಸಗುತ್ತಿರುವ ಎಸಿಪಿಯನ್ನು ಅಮಾನತುಗೊಳಿಸಿ

• ಉದಯವಾಹಿನಿ, ಕೆ.ಆರ್.ಪುರ

ದಲಿತರ ಮೇಲೆ ಎಸ್‌ಸಿ-ಎಸ್‌ಟಿ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸುವ ಮೂಲಕ ಶೋಷಣೆ ಮಾಡುತ್ತಿರುವ ಮಹದೇವಪುರ ಉಪ ವಿಭಾಗದ ಎಸಿಪಿ ರೀನಾ ಸುರ್ವಣರನ್ನು ಕೂಡಲೇ ಅಮಾನತುಗೊಳಿಬೇಕೆಂದು ವಿವಿಧ ದಲಿತಪರ ಸಂಘಟನೆಗಳ ಪದಾಧಿಕಾರಿಗಳು ಆಗ್ರಹಿಸಿದರು. ಮಹದೇವಪುರ ಕ್ಷೇತ್ರದ ಕಾಡುಗೋಡಿ ಚನ್ನಸಂದ್ರದಲ್ಲಿ ಹಮ್ಮಿಕೊಂಡಿದ್ದ ಪ್ರತಿಕಾಗೋಷ್ಠಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಜಿ.ಆರ್ ಮುನಿರಾಜ್ ಮಾತನಾಡಿ, ಎಸ್‌ಸಿ- ಎಸ್‌ಟಿ ಕಾಯ್ದೆಯನ್ನು ಸರಿಯಾಗಿ ಅಧ್ಯಯನ ಮಾಡದೇ ದೂರನ್ನು ಪರಿಶೀಲಿಸದೆ ಪರಿಶಿಷ್ಟ ಜಾತಿಯ ದಲಿತರ ಮೇಲೆ ಉದ್ದೇಶ



ಪೂರ್ವಕವಾಗಿ ಎರಡನೇ ಬಾರಿಗೆ ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸುವ ಮೂಲಕ ಅವರನ್ನು ಹತ್ತಿಕ್ಕುವ ಕೆಲಸವನ್ನು ಎಸಿಪಿ ಮಾಡುತ್ತಿದ್ದಾರೆ ಎಂದು ದೂರಿದರು.

ಕಾಡುಗೋಡಿ ಪೊಲೀಸ್ ಠಾಣೆ ವ್ಯಾಪ್ತಿಯ ಚನ್ನಸಂದ್ರ ಗ್ರಾಮದಲ್ಲಿ ವಾಸವಾಗಿರುವ ದಲಿತ ಕುಟುಂಬಕ್ಕೆ ಸೇರಿದ ಸರವಣ ಹಾಗೂ ಅವರ ಕುಟುಂಬಸ್ಥರ ಮೇಲೆ 2021 ರಲ್ಲಿ ಮತ್ತು 2026ರಲ್ಲಿ ಮತ್ತೊಮ್ಮೆ ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಪ್ರಕರಣವನ್ನು ದಾಖಲಿಸಿ ಕಿರುಕುಳ ನೀಡುತ್ತಿದ್ದಾರೆ. ಈ ಕಾಯ್ದೆಯನ್ನು ದುರುಪಯೋಗಪಡಿಸಿಕೊಂಡು ದೂರದಾರ ಜೋಗಿಸಿನಾ ನೊಂದಿಗೆ ಶಮೀಲಾಗಿ ಅಸ್ಪೃಶ್ಯರಿಗೆ ತೊಂದರೆ ನೀಡುತ್ತಿರುವ ಭ್ರಷ್ಟ ಪೊಲೀಸ್ ಅಧಿಕಾರಿಯನ್ನು ಕೂಡಲೇ ಅಮಾನತು ಮಾಡಬೇಕು ಮತ್ತು ಈ ಪ್ರಕರಣವನ್ನು ಉನ್ನತ ಅಧಿಕಾರಿಗಳು ತನಿಖೆ ನಡೆಸಿ ದಲಿತ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಇಲ್ಲದಿದ್ದರೆ ಇದೇ 30 ರಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ತಮಟೆ ಚಳುವಳಿಯನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಪ್ರತಿಕಾಗೋಷ್ಠಿಯಲ್ಲಿ ಭಾರತೀಯ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಎಂ. ರಾಮಚಂದ್ರ, ಭೂ ನ್ಯಾಯ ಮಂಡಳಿ ಸದಸ್ಯ ಚಿಕ್ಕ ಮುನಿಯಪ್ಪ, ಕೆಜೆಎಸ್ ಸಂಘಟನೆಯ ರಾಜ್ಯ ಯುವ ಘಟಕದ ಅಧ್ಯಕ್ಷ ಸಂಜಯ್, ಭಾರತೀಯ ಸ್ತ್ರೀ ಶಕ್ತಿ ಸಂಘದ ರಾಜ್ಯಾಧ್ಯಕ್ಷೆ ಭಾಗ್ಯ ಸರವಣ, ಭೀಮ್ ಪ್ರಜಾ ಸಂಘದ ಸಂಸ್ಥಾಪಕ ಅಧ್ಯಕ್ಷ ಮುರುಗೇಶ್, ಜೈ ಭೀಮ್ ಸೇವಾ ಸಮಿತಿಯ ರಾಜ್ಯಾಧ್ಯಕ್ಷ ಚಂದ್ರಹಾಸ್,ಎ.ಬಿ.ಡಿ.ಕೆ ಸಮಿತಿಯ ಕೆ.ಸಿ ಪ್ರಸಾದ್, ದ್ರವಿಡಾ ಸರ್ವನ್, ಲೋಕೇಶ್, ಶ್ರೀಕಂತ್ ರಾವನ್, ಶ್ರೀನಿವಾಸ್ ಈ ಸಂದರ್ಭದಲ್ಲಿ ಭಾಗಿಯಾಗಿದ್ದರು.

## 20 ವರ್ಷದ ಲಿವ್-ಇನ್ ಸಂಗಾತಿಯ ಕತ್ತು ಹಿಸುಕಿ ಕೊಲೆ; ಹಾಸನ ಮೂಲದ ಚಾಲಕ ಅಂದರ್!

• ಉದಯವಾಹಿನಿ,ಬೆಂಗಳೂರು

ತೀವ್ರ ವಾಗ್ವಾದದ ನಂತರ ತನ್ನ ಲಿವ್-ಇನ್ ಸಂಗಾತಿಯ ಕತ್ತು ಹಿಸುಕಿ ಕೊಂದ ಆರೋಪದ ಮೇಲೆ 27 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ. ಮೃತಳನ್ನು ಅನುಷಾ (20) ಎಂದು ಗುರುತಿಸಲಾಗಿದೆ. ಬೆಂಗಳೂರಿನಲ್ಲಿ ನೀರಿನ ಟ್ಯಾಂಕರ್ ಚಾಲಕನಾಗಿ ಕೆಲಸ ಮಾಡುತ್ತಿದ್ದ ಆರೋಪಿ ಶರತ್ ಮತ್ತು ಸಂತ್ರಸ್ತೆ ಹಾಸನ ಜಿಲ್ಲೆಯ ಸಕಲೇಶಪುರದವರು. ಇಬ್ಬರು ಇನ್‌ಸ್ಟಾಗ್ರಾಂ ಮೂಲಕ ಪರಿಚಯವಾಗಿದ್ದಾರೆ ಮತ್ತು ಕಳೆದ ಆರು ತಿಂಗಳಿನಿಂದ ಮಲ್ಲೇಶ್ವರಂನಲ್ಲಿ ಬಾಡಿಗೆ ಮನೆಯಲ್ಲಿ ಒಟ್ಟಿಗೆ ವಾಸಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ವೈಯಕ್ತಿಕ ಮತ್ತು ಕೌಟುಂಬಿಕ ವಿಷಯಗಳ ಬಗ್ಗೆ ದಂಪತಿ ನಡುವೆ ತೀವ್ರ ಜಗಳ ನಡೆದಿದ್ದು, ನಂತರ ಶರತ್ ಆಕೆಯ ಕತ್ತು ಹಿಸುಕಿ ಕೊಂದಿದ್ದಾನೆ ಎನ್ನಲಾಗಿದೆ.

## ಪಾದಚಾರಿ ಮಾರ್ಗ ಅತಿಕ್ರಮಣ ಆರೋಪ: ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ಧ ದೂರು ದಾಖಲು



• ಉದಯವಾಹಿನಿ, ಕೆ.ಆರ್.ಪುರ

ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ಅವರ ಪತಿ, ಮಾಜಿ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ವಿರುದ್ಧ ಪಾದಚಾರಿ ಮಾರ್ಗ ಮತ್ತು ಸಾರ್ವಜನಿಕ ಜಾಗ ಅತಿಕ್ರಮಣದ ಆರೋಪ ಕೇಳಿಬಂದಿದೆ. ಈ ಸಂಬಂಧ ಬೆಂಗಳೂರು ಮೂಲದ ಸಾಮಾಜಿಕ ಕಾರ್ಯಕರ್ತ ಹಾಗೂ ವಕೀಲ ಟಿ. ನರಸಿಂಹಮೂರ್ತಿ ಅವರು ಬೆಂಗಳೂರು ಮೆಟ್ರೋಪಾಲಿಟನ್ ಟಾಸ್ಕ್ ಫೋರ್ಸ್ ಗೆ ಕ್ರಿಮಿನಲ್ ದೂರು ಸಲ್ಲಿಸಿದ್ದಾರೆ.

ಎಚ್‌ಎಸ್‌ಆರ್ ಲೇಔಟ್‌ನ ಸೆಕ್ಟರ್-6ರ ಎಂಸಿಎಚ್‌ಎಸ್ ಲೇಔಟ್ 1ನೇ ಬಿ ಮೇನ್ ರಸ್ತೆಯಲ್ಲಿರುವ 14ಸಿ ಸಂಖ್ಯೆಯ ಆಸ್ತಿಯ ಜಂಟಿ ಖಾತೆದಾರರಾಗಿರುವ ಶಾಲಿನಿ ರಜನೀಶ್ ಮತ್ತು ರಜನೀಶ್ ಗೋಯಲ್ ಅವರು ತಮ್ಮ ಆಸ್ತಿಯ ಮಂಜೂರಾದ ಭೂಮಿಯನ್ನು ಮೀರಿ ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ದೂರಿನ ಪ್ರಕಾರ, ಪಾದಚಾರಿ ಮಾರ್ಗದ ಒಂದು ಭಾಗದಲ್ಲಿ ಸ್ಟೀಲ್ ಫ್ರೇಮ್ ರಚನೆಗಳನ್ನು ನಿರ್ಮಿಸಲಾಗಿದ್ದು, ಸಾರ್ವಜನಿಕ ಜಾಗದ ಒಂದು ಭಾಗವನ್ನು ಖಾಸಗೀಕರಣಗೊಳಿಸಿದಂತಾಗಿದೆ ಎಂದು ಆರೋಪಿಸಿದ್ದಾರೆ.ಇದಲ್ಲದೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವಸತಿ ಉದ್ದೇಶಕ್ಕಾಗಿ ಹಂಚಿಕೆ ಮಾಡಿದ್ದ ಆಸ್ತಿಯನ್ನು ನಿಯಮ ಉಲ್ಲಂಘಿಸಿ, ಬಾಡಿಗೆಗೆ ನೀಡಿ ವಾಣಿಜ್ಯ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ಎಂಬ ಆರೋಪವನ್ನೂ ಮಾಡಿದ್ದಾರೆ.

ಈ ಪ್ರಕರಣದಲ್ಲಿ ಗ್ರೇಟರ್ ಬೆಂಗಳೂರು ಗವರ್ನನ್ಸ್ ಕಾಯ್ದೆ-2024ರ ಅಡಿಯಲ್ಲಿ ಸಾರ್ವಜನಿಕ ರಸ್ತೆ ಮತ್ತು ಪಾದಚಾರಿ ಮಾರ್ಗದಲ್ಲಿ ಅನಧಿಕೃತ ನಿರ್ಮಾಣ, ನಗರ ಪಾಲಿಕೆ ಆಸ್ತಿಯ ಅತಿಕ್ರಮಣ ಹಾಗೂ ಅನಧಿಕೃತ ಬಳಕೆಯ ಆರೋಪಗಳನ್ನು ಉಲ್ಲೇಖಿಸಲಾಗಿದೆ.

ಭಾರತೀಯ ನ್ಯಾಯ ಸಂಹಿತೆ -2023ರ ಅಡಿಯಲ್ಲಿ ಅತಿಕ್ರಮಣ ಮತ್ತು ಸಾರ್ವಜನಿಕ ಆಸ್ತಿಗೆ ಹಾನಿ ಸಂಬಂಧಿತ ವಿಧಿಗಳನ್ನು ಅನ್ವಯಿಸುವಂತೆ ದೂರಿನಲ್ಲಿ ಮನವಿ ಮಾಡಲಾಗಿದೆ.

## ಬಿಡದಿ ಟೌನ್ ಶಿಪ್ಜೆ ಡಿಎಸ್-ಬಿಜೆಪಿ ಸರ್ಕಾರದ ತೀರ್ಮಾನ

• ಉದಯವಾಹಿನಿ, ಬೆಂಗಳೂರು



ಕುಮಾರಸ್ವಾಮಿ ಅವರು ಮೈತ್ರಿ ಸರ್ಕಾರದಲ್ಲಿ ಸಿಎಂ ಆಗಿದ್ದಾಗ 23-09-2006ರಲ್ಲಿ ಬೆಂಗಳೂರಿನ ಜನಸಂಖ್ಯೆ ಪ್ರಮಾಣ ಕಡಿಮೆ ಮಾಡಲು ಬೆಂಗಳೂರಿನ ಸುತ್ತಮುತ್ತ ಐದು ಕಡೆ 60,700 ಎಕರೆಯಲ್ಲಿ ಟೌನ್ ಶಿಪ್ ಮಾಡಲು ತೀರ್ಮಾನ ಮಾಡುತ್ತಾರೆ. ನಂದಗುಡಿ, ಕಸಬಾ, ಬಿಡದಿ, ಸೋಲೂರು, ಸಾತನೂರಿನಲ್ಲಿ ಮಾಡಲು ಮುಂದಾಗುತ್ತದೆ.

ಈ ಪೈಕಿ ಮುಂಚೂಣಿಯಲ್ಲಿರುವುದು ಬಿಡದಿಯಲ್ಲಿರುವ 9,484 ಎಕರೆಯಲ್ಲಿ ಟೌನ್ ಶಿಪ್ ಮಾಡಲು ಜೆಡಿಎಸ್ ಹಾಗೂ ಬಿಜೆಪಿ ಮೈತ್ರಿ ಸರ್ಕಾರದಲ್ಲಿ ತೀರ್ಮಾನಿಸಲಾಗುತ್ತದೆ ಎಂದು ಕೆಪಿಸಿಸಿ ವಕ್ತಾರ ಲಕ್ಷ್ಮಣ್ ರವರು ತಿಳಿಸಿದರು. ಕೆಪಿಸಿಸಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ 7481 ಎಕರೆ ಜಮೀನನ್ನು ನಮ್ಮ ಸರ್ಕಾರ 27-05-2026ರಂದು ಮತ್ತೊಮ್ಮೆ ಅಧಿಸೂಚನೆ ಹೊರಡಿಸಿದೆ. ಈ ಯೋಜನೆಯಲ್ಲಿ 7ನೇ ಬಾರಿಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗುತ್ತಿದೆ. ಈ ಯೋಜನೆಯಲ್ಲಿ ಜಮೀನು ಪಡೆದು ನಿವೇಷನ ಮಾಡಿ ಅದನ್ನು ಬೇರೆಯವರಿಗೆ ಹಂಚುವ ಉದ್ದೇಶವಿಲ್ಲ. ಕೈಗಾರಿಕಾ ಕಾರಿಡಾರ್ ಮಾಡುವ 7481 ಎಕರೆ ಜತೆಗೆ ರೆಸಿಡೆನ್ಶಿಯಲ್ ಕಾರಿಡಾರ್ ನಿರ್ಮಿಸಲಾಗುತ್ತಿದೆ. ಭೂಮಿಯನ್ನು ವಶಪಡಿಸಿಕೊಂಡು ನೀಡುವುದಷ್ಟೇ ನಮ್ಮ ಕೆಲಸ. ಉಳಿದ ಟೌನ್ ಶಿಪ್ ಅನ್ನು ಅವರೇ ನಿರ್ಮಾಣ ಮಾಡಿಕೊಳ್ಳುತ್ತಾರೆ ಎಂದು ತಿಳಿಸಿದರು.

## ಬೆಂಗಳೂರಿನಲ್ಲಿ ಇಸ್ರೋ ಸ್ಪೇಸ್ ಆನ್ ವೀಲ್ಸ್‌ವಸ್ತುಪ್ರದರ್ಶನ ಗಮನ ಸೆಳೆಯಿತು

• ಉದಯವಾಹಿನಿ, ಬೆಂಗಳೂರು

ಯುವ ಮನಸ್ಸುಗಳಲ್ಲಿ ಬಾಹ್ಯಾಕಾಶ ವಿಜ್ಞಾನದ ಬಗ್ಗೆ ಇರುವ ಕುತೂಹಲವನ್ನು ಬಲಗೊಳಿಸಲು 'ಇಸ್ರೋ' ಸಂಸ್ಥೆಯು ರೂಪಿಸಿರುವ 'ಸ್ಪೇಸ್ ಆನ್ ವೀಲ್ಸ್' ಅಭಿಯಾನದ ಅಂಗವಾಗಿ ನಗರದ ಸಪ್ತಗಿರಿ ಎನ್‌ಪಿಎಸ್ ವಿಶ್ವವಿದ್ಯಾಲಯದಲ್ಲಿ ಇತ್ತೀಚೆಗೆ ಏರ್ಪಡಿಸಿದ್ದ ವಸ್ತುಪ್ರದರ್ಶನವು ಬಾಹ್ಯಾಕಾಶದ ಅದ್ಭುತಗಳನ್ನು ತೆರೆದಿಟ್ಟಿತು. ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್ ವಿಭಾಗದ ನೇತೃತ್ವದಲ್ಲಿ ನಡೆದ ಸಂಚಾರಿ ಪ್ರದರ್ಶನವು ಬಾಹ್ಯಾಕಾಶ ಕ್ಷೇತ್ರದ ಕುತೂಹಲಕಾರಿ ಸಂಶೋಧನೆಗಳನ್ನು ಅನಾವರಣಗೊಳಿಸಿತು. ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉತ್ಸಾಹದಿಂದ ಪಾಲ್ಗೊಂಡರು.

ವಿಶೇಷವಾಗಿ ವಿನ್ಯಾಸಗೊಳಿಸಿದ ಬಸ್‌ನಲ್ಲಿ ಇಸ್ರೋದ ಉಡಾವಣಾ ವಾಹನಗಳು ಮತ್ತು ಉಪಗ್ರಹಗಳ ವಿವರವಾದ ಮಾದರಿಗಳು ಗಮನ ಸೆಳೆದವು. ಬಾಹ್ಯಾಕಾಶ ನೌಕೆಗಳ ಕಾರ್ಯವೈಖರಿ ಕುರಿತ ವಿಜ್ಞಾನ ಮಾದರಿಗಳ ಮೂಲಕ ಇಸ್ರೋ ಸಿಬ್ಬಂದಿ ಮಾಹಿತಿ ನೀಡಿದರು. ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಚಟುವಟಿಕೆಗಳನ್ನು ಹಮ್ಮಿ ಕೊಳ್ಳಲಾಗಿತ್ತು. ನೂರಾರು ವಿದ್ಯಾರ್ಥಿಗಳು ಪ್ರದರ್ಶನವನ್ನು ವೀಕ್ಷಿಸಿ, ಸಂವಾದದಲ್ಲಿ ಪಾಲ್ಗೊಂಡರು. ಪ್ರದರ್ಶನದ ಸ್ವರೂಪವನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

# ನನ್ನ ವಿರುದ್ಧ ಅಪಪ್ರಚಾರದ ಪೋಸ್ಟರ್ ವಿಕೃತ ಮನಸಿತಿ: ಕುಮಾರಸಾಮಿ ಕಿಡಿ

### ಬೆನ್ನಗಾನಹಳ್ಳಿಯಲ್ಲಿ ಸತ್ತೋದವರ ಹೆಬ್ಬಟ್ಟು ತೋರಿಸಿ ಜಮೀನು ತಗೊಂಡ ವ್ಯಕ್ತಿ ಈಗ ಅವರ ಬೆಂಬಲಿಗರಿಗೆ ಹೇಳಿ ಪೋಸ್ಟರ್ ಹಾಕಿಸಿದ್ದಾರೆ

• ಉದಯವಾಹಿನಿ, ಬೆಂಗಳೂರು

ಬಿಡದಿ ಟೌನ್ ಶಿಪ್ ವಿಚಾರದಲ್ಲಿ ನಮ್ಮ ಹೋರಾಟ ಜನತೆಗೋಸ್ಕರ, ರೈತರ ಪರವಾಗಿ, ನನ್ನ ವಿರುದ್ಧ ಪೋಸ್ಟರ್ ಅಂಟಿಸಿ ಸುಳ್ಳು ಪ್ರಚಾರ ಮಾಡುವುದಕ್ಕೆ ಹೆದರುವ, ಜಗ್ಗುವ ಪ್ರಶ್ನೆಯೇ ಇಲ್ಲ ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ತಿಳಿಸಿದ್ದಾರೆ.

ಬಿಡದಿಯಲ್ಲಿ ಹೆಚ್ ಡಿ ಕುಮಾರಸ್ವಾಮಿ ಮತ್ತು ಅವರ ಕುಟುಂಬದ ವಿರುದ್ಧ ಪೋಸ್ಟರ್ ಅಂಟಿಸಿರೋ ವಿಚಾರಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜ್ಯದ ಸಿಎಂ ಆದಮೇಲಾದ್ರೂ ಬ್ಲೂಫಿಲ್ಮ್ ಮಾಡೋದು, ಪೋಸ್ಟರ್ ಅಂಟಿಸೋದು ಬಿಡ್ತಾರೆ ಅಂದುಕೊಂಡಿದ್ದೆ. ಆ ಖಯಾಲಿ ಇನ್ನೂ ಡಿಕೆ ಶಿವಕುಮಾರ್‌ಗೆ ಹೋಗಿಲ್ಲ.

**ಹೆಚ್‌ಡಿ ಕುಮಾರಸ್ವಾಮಿ ಟೀಕಾಸ್ತ್ರ**

ಪೋಸ್ಟರ್ ಅಂಟಿಸಿ ಪ್ರಚಾರ ಮಾಡೋದಾ ನನ್ನದು ಬಿಡಿ, ನನ್ನ ಹೆಂಡತಿಯದ್ದೂ ಫೋಟೋ ಹಾಕಿದ್ದಾರೆ. 100 ಎಕರೆ ಅಂತ ಪೋಸ್ಟರ್ ಅಂತ ನಂದು ನಿಖಿಲ್ ಫೋಟೋ ಹಾಕಿದ್ದಾರೆ. 46 ಎಕರೆ 40 ವರ್ಷದ ಹಿಂದೆ ಕಷ್ಟಪಟ್ಟು ಖರೀದಿ ಮಾಡಿರೋ ಜಮೀನು. ಅದು ಬಿಟ್ಟು ನನ್ನ ಹೆಸರಿನಲ್ಲಿ ಯಾವ ಜಮೀನು ಇದೆ. 100 ಎಕರೆ ಅಂತ ಪೋಸ್ಟರ್ ಹಾಕಿದ್ದಾರೆ. ಅನಿತಾ ಕುಮಾರಸ್ವಾಮಿ ಅವರು 36-37 ಎಕರೆ ತಗೊಂಡಿದ್ದಾರೆ. ಅದು ಖರೀದಿ ಮಾಡಿರೋದು. ಖರೀದಿ ಮಾಡಿರೋದನ್ನ ಯಾವನೋ ಹೆಸರಿನಲ್ಲಿ ಪೋಸ್ಟರ್ ಹಾಕಿ ಕೊಡಿ ಅಂದರೆ ಹೇಗೆ ಎಂದು ಪ್ರಶ್ನಿಸಿದರು. ಬೆನ್ನಗಾನಹಳ್ಳಿಯಲ್ಲಿ ಸತ್ತೋದವರ ಹೆಬ್ಬಟ್ಟು ತೋರಿಸಿ ಜಮೀನು ತಗೊಂಡ ವ್ಯಕ್ತಿ ಈಗ ಅವರ ಬೆಂಬಲಿಗರಿಗೆ ಹೇಳಿ ಪೋಸ್ಟರ್ ಹಾಕಿಸಿದ್ದಾರೆ. ಪೋಸ್ಟರ್ ಹಾಕಿದ್ರೆ ಜನ ನಂಬುತ್ತಾರಾ, ಸಿಎಂ ಆದಾಗಾದ್ರೂ ಒಂದು ಸ್ಟ್ಯಾಂಡರ್ಡ್ ಬೇಡವಾ? ಸ್ಟ್ಯಾಂಡರ್ಡ್ ಇಲ್ಲದೇ ಈ ರೀತಿಯ ನಡವಳಿಕೆ, ರಾಜ್ಯ ಯಾವ ರೀತಿ ಹೊಗುತ್ತೆ ಅನ್ನೋದನ್ನ ಯೋಚನೆ ಮಾಡಬೇಕು ಎಂದು ಪ್ರಶ್ನಿಸಿದರು.

ಚಲುವರಾಯಸ್ವಾಮಿಯಂತವರ ಹೇಳಿಕೆಗಳಿಗೆ ನಾನು ಉತ್ತರ ಕೊಡಲ್ಲ, ಅವರು ಪಾಪ ಅವರ ಕುರ್ಚಿ ಉಳಿಸಿಕೊಳ್ಳಲು ಮಾತನಾಡುತ್ತಿದ್ದಾರೆ ಎಂದರು.



**ಸಿಎಂ ಆದ್ಮೇಲಾದ್ರೂ ಬ್ಲೂಫಿಲ್ಮ್ ಮಾಡ್ಸೋದು, ಪೋಸ್ಟರ್ ಅಂಟಿಸೋದು ಬಿಡ್ತಾರೆ ಅಂದುಕೊಂಡಿದ್ದೆ, ಖಯಾಲಿ ಬಿಟ್ಟಿಲ್ಲ**

### ನಮ್ಮ ಶಾಸಕರು ನಮ್ಮೊಂದಿಗಿದ್ದಾರೆ

ವಿಧಾನ ಪರಿಷತ್ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಗೆಲ್ಲುವುದಿಲ್ಲ ಎಂದು ಗೊತ್ತದ್ದರೂ, ನಮ್ಮೆಲ್ಲ ಶಾಸಕರು ಒಟ್ಟಾಗಿರಲಿ ಎಂಬ ಕಾರಣಕ್ಕೆ ಅಭ್ಯರ್ಥಿಯನ್ನು ಕಣಕ್ಕೆ ಇಳಿಸಿದ್ದೇವೆ. ಬಿಜೆಪಿ ಬಳಿ ಹೆಚ್ಚುವರಿ ಮತಗಳಿವೆ. ಅವರ ಸಹಕಾರ ಕೋರಿದ್ದೇವೆ' ಎಂದು ಕುಮಾರಸ್ವಾಮಿ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಕಾಂಗ್ರೆಸ್‌ನ ಭಿನ್ನಮತದ ಕಾರಣಕ್ಕೆ ಅವರ ಮತಗಳು ನಿಮಗೆ ಬೀಳಬಹುದೇ ಎಂದು ಸುದ್ದಿಗಾರರು ಪ್ರಶ್ನಿಸಿದಾಗ, 'ಹಾಗೆ ಆದರೆ ಒಳ್ಳೆಯದು. ಆಗ ಸರ್ಕಾರವನ್ನು ಬಿಗಿಗೊಳಿಸಲು ನಮಗೆ ಅಸ್ತ್ರ ಸಿಕ್ಕಂತಾಗುತ್ತದೆ ಎಂದರು.

### ಇದು ಡಿಕೆಶಿ ವಿಕೃತ ಮನಸು

ಇವರು ಮೊದಲಿಂದ ಬಂದಿರೋದು ಇದರಿಂದಲೇ. ಈ ಖಯಾಲಿಯಲ್ಲಿ ಬಂದ ವ್ಯಕ್ತಿ ಸಿಎಂ ಆದ ಮೇಲೂ ಸಿಎಂ ಕುರ್ಚಿಗೆ ಗೌರವ ಬೇಡವಾ? ಪೋಸ್ಟರ್ ಹಾಕಿಕೊಂಡು ಅಪ ಪ್ರಚಾರ ಮಾಡ್ತಾ ಇದ್ದಾರೆ. ಅಶೋಕ್, ನಾರಾಯಣಸ್ವಾಮಿ, ವಿಜಯೇಂದ್ರ ವಿರುದ್ಧ ಪೋಸ್ಟರ್ ಹಾಕಿದ್ದಾರೆ. ತಪ್ಪು ಮಾಡಿದ್ರೆ ಸಿಎಂ ಆಗಿ ಆಕ್ಷನ್ ತಗೊಳೋಕೆ ಹೇಳಿ ಅಧಿಕಾರಿಗಳಿಗೆ. ಸುಮ್ಮನೆ ಯಾಕೆ ಪೋಸ್ಟರ್ ಹಾಕಿದ್ದೀರಾ? ಇಲ್ಲಿವರೆಗೂ ಕಾಂಗ್ರೆಸ್ ನ ಮಂತ್ರಿಗಳು ಶಾಸಕರದ್ದೇ ನಡೆದು ಹೋಯ್ತು.

ವಿಧಾನಸಭೆ ಕಲಾಪದಲ್ಲಿ ನಡೆದು ಹೋಯ್ತು. ಮತ್ತೆ ಅವರನ್ನ ಬಾಯಿ ಮುಚ್ಚಿಸಿದ್ರು. ಸತ್ಯ ಹೇಳ್ತೀನಿ ಅಂತ ಅವರು ಬಾಯಿಯೇ ತೆಗೆಯಲಿಲ್ಲ. ಇನ್ನು ಮುಂದೆಯಾದ್ರು ನಿಲ್ಲುತ್ತೇನೋ ಅಂದುಕೊಂಡಿದ್ವಿ, ಆದ್ರೆ ಆ ಖಯಾಲಿ ಹೋಗಿಲ್ಲ ಎಂದು ಕಿಡಿ ಕಾರಿದರು. ನಮ್ಮದೊಂದು ಸಣ್ಣಪಕ್ಷ, ನಮ್ಮ ಕೈಯಲ್ಲಿ ಏನಿದೆ, ಇಂದು ಅವರ ಕೈಯಲ್ಲಿ ಸರ್ಕಾರವಿದೆ, ಹಣಬಲ, ತೋಳ್ಬಲ, ಜನತೆ ಬಲ ಇದೆ, ಅವರ ಮುಂದೆ ಫೈಟ್ ಮಾಡಲು ಆಗುವುದಿಲ್ಲ, ನಮಗೆ ಬಿಜೆಪಿಯ ಬಗ್ಗೆ ಬೆಂಬಲವಿಲ್ಲ, ಎಂದು ನಾಳೆ ನಡೆಯುವ ವಿಧಾನ ಪರಿಷತ್ ಚುನಾವಣೆ ಬಗ್ಗೆ ಹೇಳಿದರು.

# ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ಗುಂಡಿಗಳು, ದೋಷಗಳನ್ನು ಪತ್ತೆಹಚ್ಚಲು ಎಐ-ಡ್ರೋನ್‌ಗಳ ಬಳಕೆ

### ರಸ್ತೆ ಗುಂಡಿಗಳು ಹಾಗೂ ಇತರ ದೋಷಗಳನ್ನು ಗುರುತಿಸಲು ಸಾಧ್ಯ

### ಹೆದ್ದಾರಿ ಆಸ್ತಿಗಳ ಡಿಜಿಟಲ್ ದಾಖಲೆಗಳನ್ನು ಸೃಷ್ಟಿಸಲು ಡ್ರೋನ್

• ಉದಯವಾಹಿನಿ, ಬೆಂಗಳೂರು

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರಾಷ್ಟ್ರೀಯ ಹೆದ್ದಾರಿಗಳ ನಿರ್ವಹಣಾ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತರುತ್ತಿದ್ದು, ಕೃತಕ ಬುದ್ಧಿಮತ್ತೆ , ಡ್ರೋನ್‌ಗಳು ಮತ್ತು ಸುಧಾರಿತ ವಿಶ್ಲೇಷಣಾ ತಂತ್ರಜ್ಞಾನಗಳನ್ನು ಬಳಸುವ ಪೂರ್ವಾನುಮಾನ ಆಸ್ತಿ ನಿರ್ವಹಣಾ ಚೌಕಟ್ಟನ್ನು ಅಳವಡಿಸಿಕೊಳ್ಳುತ್ತಿದೆ. ಇದರ ಮೂಲಕ ರಸ್ತೆ ಗುಂಡಿಗಳು ಹಾಗೂ ಇತರ ದೋಷಗಳನ್ನು ಗುರುತಿಸಲು ಸಾಧ್ಯವಾಗಲಿದೆ.

ಸಾಂಪ್ರದಾಯಿಕ ನಿರ್ವಹಣಾ ವಿಧಾನಗಳಿಂದ ಹೊರಬಂದು, ಡೇಟಾ



ಆಧಾರಿತ ಮೇಲ್ವಿಚಾರಣೆಯ ಮೂಲಕ ಹೆದ್ದಾರಿಗಳ ಗುಣಮಟ್ಟವನ್ನು ಸುಧಾರಿಸುವುದು ಹಾಗೂ ಸಮಯಕ್ಕೆ ಸರಿಯಾಗಿ ದುರಸ್ತಿ ಕಾರ್ಯಗಳನ್ನು ಕೈಗೊಳ್ಳುವುದು ಇದರ ಉದ್ದೇಶವಾಗಿದೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ರಸ್ತೆ ಮೇಲ್ಮೈಗಳ ಸ್ಥಿತಿಯನ್ನು ಪರಿಶೀಲಿಸಲು ನೆಟ್‌ವರ್ಕ್ ಸರ್ವೇ ವಾಹನಗಳನ್ನು ನಿಯೋಜಿಸಿದೆ. ಇವು ರಸ್ತೆಯಲ್ಲಿ ಹೊಂಡ, ಗುಂಡಿಗಳ ಪರಿಸ್ಥಿತಿ, ಹಳ್ಳಗಳ ನಿರ್ಮಾಣ ಬಿರುಕುಗಳು ಮತ್ತು ರಚನಾತ್ಮಕ ಹಾನಿಗಳನ್ನು ಮೌಲ್ಯಮಾಪನ ಮಾಡುತ್ತವೆ. ಅದೇ ರೀತಿ, ಡ್ರೋನ್ ಅನಾಲಿಟಿಕ್ಸ್ ಮಾನಿಟರಿಂಗ್ ಸಿಸ್ಟಮ್‌ಗಳು ಹೆದ್ದಾರಿ ಆಸ್ತಿಗಳ ಡಿಜಿಟಲ್ ದಾಖಲೆಗಳನ್ನು ಸೃಷ್ಟಿಸಲು, ವಿವಿಧ ರಚನೆಗಳ ಮೇಲ್ವಿಚಾರಣೆ ಮಾಡಲು ಹಾಗೂ ಅತಿಕ್ರಮಣಗಳನ್ನು ಪತ್ತೆಹಚ್ಚಲು ಬಳಸಲಾಗುತ್ತಿದೆ. ಫಾಲಿಂಗ್ ವೇಟ್ ಡಿಫ್ಲೆಕ್ಟೋಮೀಟರ್ ಪರೀಕ್ಷೆಗಳ ಮೂಲಕ ರಸ್ತೆ ಮೇಲ್ಮೈಯ ಬಲವನ್ನು ಪರಿಶೀಲಿಸಿ, ದುರ್ಬಲಗೊಳ್ಳುತ್ತಿರುವ ರಸ್ತೆ ಭಾಗಗಳನ್ನು ಗುರುತಿಸಲಾಗುತ್ತಿದೆ. ಇದರ ಜೊತೆಗೆ, ಕಾರ್ಯನಿರ್ವಹಣೆಯಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಆಧಾರಿತ ಡ್ಯಾಶ್‌ಕ್ಯಾಮ್ ಅನಾಲಿಟಿಕ್ಸ್ ಸೇವೆಗಳನ್ನು ಜಾರಿಗೊಳಿಸಲಾಗುತ್ತಿದೆ. ಈ ತಂತ್ರಜ್ಞಾನವು ರಸ್ತೆ ಗುಂಡಿಗಳು, ಹಾನಿಗೊಳಗಾದ ಕ್ರ್ಯಾಶ್ ಬ್ಯಾರಿಯರ್‌ಗಳು, ದೋಷಪೂರಿತ ಬೆಳಕು ವ್ಯವಸ್ಥೆಗಳು ಮತ್ತು ನೀರು ಹರಿಯುವ ವ್ಯವಸ್ಥೆಯ ಸಮಸ್ಯೆಗಳನ್ನು ಸ್ವಯಂಚಾಲಿತವಾಗಿ ಪತ್ತೆಹಚ್ಚುತ್ತದೆ.

## ಫ್ರೀ ಲಿಫ್ಟ್ ನಂಬಿ ಕಾರು ಹತ್ತಿದ ಟೈಲರ್‌ಗೆ ಶಾಕ್; ಹಲ್ಲೆ ನಡೆಸಿ ನಗದು ದೋಚಿದ ಗ್ಯಾಂಗ್,


• ಉದಯವಾಹಿನಿ, ಬೆಂಗಳೂರು

ಫ್ರೀ ಲಿಫ್ಟ್ ನಂಬಿ ಕಾರು ಹತ್ತಿದ ವ್ಯಕ್ತಿಯೊಬ್ಬರನ್ನು ನಾಲ್ವರು ದುಷ್ಕರ್ಮಿಗಳು ಹಲ್ಲೆ ನಡೆಸಿ, ದರೋಡೆ ಮಾಡಿರುವ ಘಟನೆಯೊಂದು ಕನಕಪುರ ಪಟ್ಟಣದಲ್ಲಿ ನಡೆದಿದೆ.

ಕನಕಪುರ ತಾಲ್ಲೂಕಿನ ಕಾಳೇಗೌಡನ ದೊಡ್ಡಿ ನಿವಾಸಿ ಎಂ. ರಾಜು ಕುಮಾರ್ ದರೋಡೆಗೊಳಗಾದ ವ್ಯಕ್ತಿ. ಶನಿವಾರ ರಾತ್ರಿ ಕೆಎನ್‌ಎಸ್ ವೃತ್ತದ ಬಳಿಯ ಔಷಧ ಅಂಗಡಿಗೆ ಔಷಧ ಖರೀದಿಸಲು ತೆರಳಿದ್ದ ಅವರು, ಮನೆಗೆ ಹಿಂತಿರುಗಲು ಬಸ್ ಸಿಗದ ಕಾರಣ ರಾತ್ರಿ ಸುಮಾರು 10.30ರ ವೇಳೆಗೆ ಫ್ರೀ ಲಿಫ್ಟ್ ನೀಡುತ್ತೇವೆಂದು ಹೇಳಿದ್ದ ವ್ಯಕ್ತಿಗಳ ನಂಬಿ ಕಾರು ಹತ್ತಿದ್ದರು.

ರಾಜು ಅವರು ಹತ್ತಿದ್ದ ಕಾರಿನಲ್ಲಿ ಅದಾಗಲೇ ಇಬ್ಬರು ವ್ಯಕ್ತಿಗಳು ಇದ್ದರು. ರಾಜು ಅವರನ್ನು ಕಾರು ಹತ್ತಿಸಿಕೊಂಡ ಆರೋಪಿಗಳು, ಅವರನ್ನು ಅವರ ಮನೆ ಕಡೆಗೆ ಕರೆದೊಯ್ಯುವ ಬದಲು ರಾಮನಗರದತ್ತ ಕರೆದುಕೊಂಡು ಹೋಗಿದ್ದಾರೆ. ಬಳಿಕ ತಮ್ಮ ಇನ್ನಿಬ್ಬರು ಸಹಚರರನ್ನು ಕರೆಸಿಕೊಂಡಿದ್ದಾರೆ.

ನಾಲ್ವರೂ ಸೇರಿ ನಿರ್ಜನ ಪ್ರದೇಶದಲ್ಲಿ ಕಾರು ನಿಲ್ಲಿಸಿ ರಾಜು ಅವರ ಮೇಲೆ ಹಲ್ಲೆ ನಡೆಸಿದ್ದಾರೆ. ಅವರ ಬಳಿಯಿದ್ದ 5,000 ರೂಪಾಯಿ ನಗದು ಕಸಿದುಕೊಂಡು, ಇನ್ನೂ 20,000 ರೂಪಾಯಿ



ಕಳುಹಿಸುವಂತೆ ಸ್ನೇಹಿತರು ಅಥವಾ ಸಂಬಂಧಿಕರಿಗೆ ಕರೆ ಮಾಡಲು ಒತ್ತಾಯಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ರಾಜು ಕುಮಾರ್ ಅವರ ಮೊಬೈಲ್ ಫೋನ್ ಬಳಸಿ ವಿವಿಧ ಯುಪಿಐ ಖಾತೆಗಳಿಗೆ ಹಣ ವರ್ಗಾಯಿಸಿಕೊಂಡಿದ್ದಾರೆ. ಬಳಿಕ ಮೊಬೈಲ್ ಕಸಿದುಕೊಂಡು, ಸುಮಾರು 1 ಗಂಟೆ ವೇಳೆಗೆ ಚನ್ನಪಟ್ಟಣ ಸೇತುವೆ ಬಳಿ ಅವರನ್ನು ಕಾರಿನಿಂದ ತಳ್ಳಿ ಪರಾರಿಯಾಗಿದ್ದಾರೆ.

ಗಾಯಗೊಂಡಿದ್ದ ರಾಜು ಅವರು, ಬಳಿಕ ರಾಮನಗರದ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಯುಪಿಐ ಹಣ ವರ್ಗಾವಣೆ ವಿವರಗಳ ಆಧಾರದಲ್ಲಿ ಆರೋಪಿಗಳ ಬಗ್ಗೆ ಮಹತ್ವದ ಸುಳಿವುಗಳನ್ನು ಸಂಗ್ರಹಿಸಿದ್ದಾರೆ.

## ವಾಹನ ಪ್ರವೇಶ ನಿರ್ಬಂಧ, ಬೀದಿ ವ್ಯಾಪಾರಿಗಳ ತೆರವಿಗೆ ವಿರೋಧ ಕೆ.ಆರ್. ಮಾರುಕಟ್ಟೆಯಲ್ಲಿ ರೈತರ ಪ್ರತಿಭಟನೆ, ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಕೃಷಿ ಉತ್ಪನ್ನಗಳನ್ನು ಹೊತ್ತೊಯ್ಯುವ ವಾಹನಗಳ ಪ್ರವೇಶಕ್ಕೆ ವಿಧಿಸಿರುವ ನಿರ್ಬಂಧ ಹಾಗೂ ಬೀದಿ ವ್ಯಾಪಾರಿಗಳ ತೆರವು ಕ್ರಮವನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘಟನೆಯ ಸದಸ್ಯರು ಕೆ.ಆರ್. ಮಾರುಕಟ್ಟೆಯಲ್ಲಿ ಪ್ರತಿಭಟನೆ ನಡೆಸಿದರು.

ಸಂಘದ ರಾಜ್ಯಾಧ್ಯಕ್ಷ ಕೊಡಿಹಳ್ಳಿ ಚಂದ್ರಶೇಖರ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಿಂದ ಕೆಲ ಗಂಟೆಗಳ ಕಾಲ ಕೆ.ಆರ್. ಮಾರುಕಟ್ಟೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವ್ಯಾಪಾರ-ವಹಿವಾಟು ಚಟುವಟಿಕೆಗಳು ಸ್ಥಗಿತಗೊಂಡವು.

ಹೊಸ ಪಾರ್ಕಿಂಗ್ ವ್ಯವಸ್ಥೆ ಜಾರಿಯಾದ



ಬಳಿಕ ರೈತರು ಮತ್ತು ವ್ಯಾಪಾರಿಗಳು ತಮ್ಮ ಕೃಷಿ ಉತ್ಪನ್ನಗಳನ್ನು ಹೊತ್ತ ವಾಹನಗಳನ್ನು ಮಾರುಕಟ್ಟೆ ಆವರಣದೊಳಗೆ ಕೊಂಡೊಯ್ಯಲು ಸಾಧ್ಯವಾಗುತ್ತಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು. ಮಾರುಕಟ್ಟೆಯಲ್ಲಿದ್ದ ಮುಕ್ತ ಪ್ರವೇಶ ಮತ್ತು ನಿರ್ಗಮನ ದ್ವಾರಗಳನ್ನು ಬಂದ್ ಮಾಡಲಾಗಿದೆ. ಸಗಟು ಮಾರುಕಟ್ಟೆ ಪ್ರದೇಶದಿಂದ ದೂರದಲ್ಲೇ ವಾಹನಗಳನ್ನು ನಿಲ್ಲಿಸುವಂತೆ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿದೆ ಎಂದು ಕೊಡಿಹಳ್ಳಿ ಚಂದ್ರಶೇಖರ್ ಅವರು ತಿಳಿಸಿದರು. ರೈತರು ಮತ್ತು ವ್ಯಾಪಾರಿಗಳ ವಾಹನಗಳನ್ನು ಮಾರುಕಟ್ಟೆಯಿಂದ ಸುಮಾರು ಒಂದು ಕಿಲೋಮೀಟರ್ ದೂರದಲ್ಲಿ ನಿಲ್ಲಿಸಲಾಗುತ್ತಿದೆ. ಇದರಿಂದ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಹೆಚ್ಚುವರಿ ವೆಚ್ಚ ಭರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

## ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಿಗೆ ಡಿಜಿ, ಐಜಿಪಿ ಸಲೀಂ ಕಟ್ಟುನಿಟ್ಟಿನ ಸೂಚನೆ

• ಉದಯವಾಹಿನಿ, ಬೆಂಗಳೂರು

ಖಾಸಗಿ ಅಥವಾ ಆಪ್ತ ಕ್ಷಣಗಳ ಫೋಟೋ ಹಾಗೂ ವಿಡಿಯೊಗಳನ್ನು ಅನುಮತಿಯಿಲ್ಲದೆ ಹಂಚಿಕೆ ಮಾಡುವುದು, ರಿವೆಂಜ್ ಪೋರ್ನ್ ,ಸೆಕ್ಸ್‌ಟಾರ್ಷನ್' ಅಥವಾ ಬ್ಲ್ಯಾಕ್ ಮೇಲ್ ಮಾಡುವ ಪ್ರಕರಣಗಳಲ್ಲಿ ತಕ್ಷಣ ಎಫ್‌ಐಆರ್ ದಾಖಲಿಸಬೇಕು ಎಂದು ರಾಜ್ಯ ಪೊಲೀಸ್ ಮಹಾನಿರ್ದೇಶಕ ಮತ್ತು ಇನ್ಸ್‌ಪೆಕ್ಟರ್ ಜನರಲ್ (ಡಿಜಿ ಮತ್ತು ಐಜಿಪಿ) ಎಂಎ ಸಲೀಂ ಅವರು ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ಈ ಕುರಿತು ಸುತ್ತೋಲೆ ಹೊರಡಿಸಲಾಗಿದೆ.

ಇಂತಹ ಪ್ರಕರಣಗಳಲ್ಲಿ ಕೆಲ ಪೊಲೀಸ್ ಠಾಣೆಗಳು ದೂರು ದಾಖಲಿಸಲು ನಿರಾಕರಿಸುತ್ತಿರುವುದು ಅಥವಾ ಅನಗತ್ಯ ವಿಳಂಬ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಈ ಕುರಿತು ಸುತ್ತೋಲೆ ಹೊರಡಿಸಲಾಗಿದೆ. ಕೆಲವು ಸಂದರ್ಭಗಳಲ್ಲಿ ಸಂತ್ರಸ್ತರು ಆರಂಭದಲ್ಲಿ ಫೋಟೋ ಅಥವಾ ವಿಡಿಯೊ ಚಿತ್ರೀಕರಣಕ್ಕೆ ಒಪ್ಪಿಗೆ ನೀಡಿದ್ದರು ಎಂಬ ಕಾರಣವನ್ನು ಮುಂದಿಟ್ಟು ದೂರುಗಳನ್ನು ತಿರಸ್ಕರಿಸಲಾಗುತ್ತಿದೆ. ಇದು ಕಾನೂನುಬದ್ಧವಾಗಿ ಸರಿಯಲ್ಲ ಎಂದು ಹೇಳಿದ್ದಾರೆ.

# 200 ಕೋಟಿ ರೂ ತರಲು ನಾನು ಧರ್ಮಸ್ಥಳದ ವಿರೋಧಿಯೇ?: ಪ್ರಕಾಶ್ ರೈ ಸ್ಪಷ್ಟನೆ

### ನಮ್ಮ ಅಸಹಾಯಕತೆ ಅರ್ಥಮಾಡಿಕೊಳ್ಳಿ ಎಂದು ಹೇಳಿಕೊಳ್ಳುತ್ತಾರೆ. ಇದು ನನಗೆ ಅರ್ಥವಾಗುತ್ತದೆ ಎಂದು ಹೇಳಿದರು

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ಕ್ಷೇತ್ರದ ವಿರುದ್ಧದ ಷಡ್ಯಂತ್ರದ ಕೇಸಿನಲ್ಲಿ ನನ್ನ ಹೆಸರನ್ನು ಯಾಕೆ ತಳುಕು ಹಾಕಲಾಗುತ್ತಿದೆ? ಎಂದು ನಟ ಪ್ರಕಾಶ್ ರಾಜ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪ್ರೆಸ್ ಕ್ಲಬ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಕಾಶ್ ರಾಜ್ ಅವರು ತಮಗೆ ಹಾಗೂ ಈ ಪ್ರಕರಣದ ಪ್ರಮುಖ ವ್ಯಕ್ತಿ ಎನ್ನಲಾದ ಚಿನ್ನಯ್ಯನಿಗೆ ಇರುವ ಲಿಂಕ್ ಏನು ಎಂಬುದನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಅದೇ ರೀತಿ ಚಿನ್ನಯ್ಯನಿಗೆ ನೀನು ನನ್ನ ಮುಂದೆ ಹೇಳಿದ ಸತ್ಯವನ್ನು ಎಸ್‌ಐಟಿ ಮುಂದೆ ಹೋಗಿ ಹೇಳು. ಸತ್ಯ ಹೇಳಿದರೆ ಊರೇ ಕೊಂಡಾಡುತ್ತೆ. ನಾನು ನಿನ್ನ ತಬ್ಬಿಕೊಳ್ತಿನಿ ಎಂದು ಹೇಳಿದ್ದೆ ಎಂದು ಸ್ಪಷ್ಟಪಡಿಸಿದ್ದಾರೆ. ಸುದ್ದಿಗೋಷ್ಠಿಯ ಆರಂಭದಲ್ಲೇ ಮಾಧ್ಯಮಗಳ ಆಹ್ವಾನ ಪತ್ರಿಕೆಯ ವಿವಾದಕ್ಕೆ ಪ್ರತಿಕ್ರಿಯಿಸಿದ ಅವರು, ನಾನು ಸಾಮಾಜಿಕ ಜಾಲತಾಣಗಳಲ್ಲಿ ಪ್ರೆಸ್ ಮೀಟ್ ಬಗ್ಗೆ ಪೋಸ್ಟ್ ಹಾಕಿದಾಗ 'ಮಾರಿಕೊಂಡ ಮಾಧ್ಯಮಗಳು' ಎಂಬ ಪದ ಬಳಕೆಯಾಗಿದ್ದು ನಿಜ.ಆದರೆ, ಪ್ರೆಸ್ ಕ್ಲಬ್‌ಗೆ ಅಧಿಕೃತವಾಗಿ ಕಳುಹಿಸಿದ ಇನ್ವಿಟೇಶನ್‌ನಲ್ಲಿ ನಾನು ಆ ಪದ ಬಳಸಿಲ್ಲ. ಅಲ್ಲಿ ನಾನು ಮಾಧ್ಯಮದವರನ್ನು ನಮ್ಮ ಬಂಧುಗಳು, ಆತ್ಮೀಯರು



ಎಂದೇ ಕರೆದಿದ್ದೇನೆ. ನನಗೆ ಕೆಲವು ಗಂಭೀರ ಪ್ರಶ್ನೆಗಳಿಗೆ ಉತ್ತರ ಕೊಡಬೇಕಿದ್ದ ಕಾರಣ ಈ ಸುದ್ದಿಗೋಷ್ಠಿ ಕರೆದಿದ್ದೇನೆ ಎಂದರು. ಪತ್ರಿಕೋದ್ಯಮದಲ್ಲಿ ಸಾಕಷ್ಟು ಜನ ಗೆಳೆಯರಿದ್ದಾರೆ. ಅವರು ದೂರವಾಣಿ ಮೂಲಕ ನನ್ನೊಂದಿಗೆ ಮಾತನಾಡಿ ಸತ್ಯವನ್ನು ಬರೆಯಲು ಆಗುತ್ತಿಲ್ಲ ಎಂದು ಹೇಳುತ್ತಾರೆ. ನಮ್ಮ ಅಸಹಾಯಕತೆ ಅರ್ಥಮಾಡಿಕೊಳ್ಳಿ ಎಂದು ಹೇಳಿಕೊಳ್ಳುತ್ತಾರೆ. ಇದು ನನಗೆ ಅರ್ಥವಾಗುತ್ತದೆ ಎಂದು ಹೇಳಿದರು. ಅಲ್ಲದೆ ಪ್ರೆಸ್ ಕ್ಲಬ್ ಕಡೆಯಿಂದ ಕಳಿಸಿರುವ ಅಧಿಕೃತ ಆಹ್ವಾನದಲ್ಲಿ ಈ ಹೇಳಿಕೆ ಇಲ್ಲ. ಆದರೆ, ಧರ್ಮಸ್ಥಳ ಪ್ರಕರಣದಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಉದ್ದೇಶ ಪೂರಕವಾಗಿ ನನ್ನನ್ನು ತೇಜೋವಧೆ ಮಾಡುತ್ತಿರುವ ಮಾಧ್ಯಮಗಳನ್ನೇ ಗುರಿಯಾಗಿಸಿ ಇದನ್ನು ಹೇಳಿದ್ದೇನೆ ಹೊರತು ಬೇರೆ ಯಾವುದೇ ಅರ್ಥ ಬೇಕಿಲ್ಲ ಎಂದರು.

ಧರ್ಮಸ್ಥಳ ಬುರುಡೆ ಪ್ರಕರಣದ ಪ್ರಮುಖ ಆರೋಪಿಯಾಗಿರುವ ಚಿನ್ನಯ್ಯ ತನಗೆ ಪ್ರಕಾಶ್ ರಾಜ್ ಕರೆ ಮಾಡಿ ಗಿರೀಶ್ ಮಟ್ಟಣ್ಣನವರ್ ಹೇಳಿದಂತೆ ಕೇಳು ಎಂದು ಹೇಳಿದ್ದರು ಎಂದು ಆರೋಪ ಮಾಡಿದ್ದಾನೆ. ಹೀಗಾಗಿಯೇ, ಪತ್ರಿಕಾಗೋಷ್ಠಿ ನಡೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು. ಮಾಧ್ಯಮಗಳಲ್ಲಿ ಚಿನ್ನಯ್ಯ ಎಂಬಾತ ನನ್ನ ಹೆಸರು ಹೇಳಿದ್ದಾನೆ ಎಂದು ಕೆಲವು ಮಾಧ್ಯಮಗಳು ವರದಿ ಮಾಡಿವೆ. ಈ ಪ್ರಕರಣದಲ್ಲಿ 200 ಕೋಟಿ ರೂಪಾಯಿ ಹಗರಣ, ಪೇಮೆಂಟ್ ವ್ಯವಹಾರ ನಡೆದಿದೆ ಎಂದು ಚಿನ್ನಯ್ಯ ಹೇಳಿದ್ದಾನಂತೆ. ಕೆಲವು ಮಾಧ್ಯಮಗಳಂತೂ ಈ ಷಡ್ಯಂತ್ರದಲ್ಲಿ ಪ್ರಕಾಶ್ ರಾಜ್ ಕೈವಾಡ ಇದೆ ಎಂದು ಅವರೇ ಸ್ವತಃ ಡಿಕ್ಲೇರ್ ಮಾಡಿಬಿಟ್ಟಿದ್ದಾರೆ. ಆದರೆ ನಾನು ಇದುವರೆಗೂ ಚಿನ್ನಯ್ಯ ಅಥವಾ ಮಟ್ಟಣ್ಣನವರ್ ಸೇರಿ ಯಾರನ್ನೂ ಖುದ್ದಾಗಿ ಭೇಟಿ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.


ಧರ್ಮಸ್ಥಳದಲ್ಲಿ ಸತ್ತಿರುವ ಹೆಣ್ಣು ಮಕ್ಕಳ ಮೇಲೆ ನಿಮಗೇಕೆ ಕನಿಕರ ಇಲ್ಲ? ಅಲ್ಲಿ ಮೃತಪಟ್ಟ ಹೆಣ್ಣು ಮಕ್ಕಳು ನಮ್ಮವರಲ್ವಾ? ಸೌಜನ್ಯ ಹೇಗೆ ಸತ್ತಳು ಮತ್ತು ಅಲ್ಲಿ ಉಳಿದ ಹೆಣ್ಣು ಮಕ್ಕಳ ಸಾವುಗಳು ಹೇಗೆ ಸಂಭವಿಸಿದವು ಎಂದು ಪ್ರಶ್ನಿಸುವುದು ತಪ್ಪಾ? ನಾನು ಆ ಸಾವುಗಳ ನ್ಯಾಯಕ್ಕಾಗಿ ಪ್ರಶ್ನೆ ಮಾಡಿದ್ದೇನೆಯೇ ಹೊರತು ಕ್ಷೇತ್ರದ ವಿರುದ್ಧ ಷಡ್ಯಂತ್ರ ಮಾಡಿಲ್ಲ ಎಂದು ಪ್ರಕಾಶ್ ರಾಜ್ ಸ್ಪಷ್ಟಪಡಿಸಿದ್ದಾರೆ.

**ಯಾರನ್ನೂ ಖುದ್ದಾಗಿ ಭೇಟಿ ಮಾಡಿಲ್ಲ**

# ಸರ್ಕಾರಿ ಕಚೇರಿಗಳಿಗೆ ಡಿಸಿ ಭೇಟಿ ಅಧಿಕಾರಿಗಳಿಗೆ ತರಾಟೆ

• ಉದಯವಾಹಿನಿ, ಕೋಲಾರ


ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ರಾಜ್ಯಾದ್ಯಂತ ಸರ್ಕಾರಿ ನೌಕರರು ಕಡ್ಡಾಯವಾಗಿ 'ಕರ್ತವ್ಯ ಆಪ್ ಬಳಸಬೇಕೆಂಬ ಆದೇಶದ ಬೆನ್ನಲ್ಲೇ, ಜಿಲ್ಲಾಧಿಕಾರಿ ಡಾ. ರವಿ ಅವರು ಜಿಲ್ಲಾಡಳಿತ ಭವನದಲ್ಲಿರುವ ವಿವಿಧ ಸರ್ಕಾರಿ ಕಚೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಕಚೇರಿಗಳಲ್ಲಿನ ಅವ್ಯವಸ್ಥೆ ಹಾಗೂ ಸಿಬ್ಬಂದಿಯ ಗೈರುಹಾಜರಿ ಕಂಡು ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು.


ಉದಯವಾಹಿನಿ ಚಿತ್ರ

ಜಿಲ್ಲಾಧಿಕಾರಿಗಳು ಖಾದಿ ಗ್ರಾಮೋದ್ಯೋಗ ಮಂಡಳಿ, ಚುನಾವಣಾ ಶಾಖೆ, ಅಂಬೇಡ್ಕರ್ ಅಭಿವೃದ್ಧಿ ನಿಗಮ, ಭೋವಿ ಅಭಿವೃದ್ಧಿ ನಿಗಮ, ಪ್ರವಾಸೋದ್ಯಮ ಇಲಾಖೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ. ಕೈಮಗ್ಗ ಮತ್ತು ಜವಳಿ ಇಲಾಖೆ, ಕಾರ್ಮಿಕ ಸೇರಿದಂತೆ ಇತರ ಇಲಾಖೆಗಳ ಪ್ರಮುಖ ವಿಭಾಗಗಳಿಗೆ ದಿಢೀರ್ ಭೇಟಿ ನೀಡಿದರು. ಬೆಳಿಗ್ಗೆ 10:45 ಆದರೂ ಹಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ಕರ್ತವ್ಯಕ್ಕೆ ಹಾಜರಾಗದಿರುವುದು ಕಂಡುಬಂತು. ಕಚೇರಿಯ ಖಾಲಿ ಕುರ್ಚಿಗಳನ್ನು ಕಂಡ ಡಿಸಿ, ಕರ್ತವ್ಯ ಲೋಪವೆಸಗಿದ ಹಾಗೂ ಅನಧಿಕೃತವಾಗಿ ಗೈರಾದ ಸಿಬ್ಬಂದಿಗೆ ತಕ್ಷಣವೇ 'ಶೋಕಾಸ್ ನೋಟಿಸ್ ಜಾರಿ ಮಾಡುವಂತೆ ಮೇಲಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು. ನಿಗಮ ಮಂಡಳಿಗಳ ಕಾರ್ಯವೈಖರಿಯನ್ನು ತಪಾಸಣೆ ಮಾಡಿದ ಡಾ. ರವಿ ಅವರು, ರಿಕವರಿ ಅಧಿಕಾರಿಗಳಿಗೆ ನೇರ ಎಚ್ಚರಿಕೆ ರವಾನಿಸಿದರು. ಇದು ಸರ್ಕಾರದ ಯೋಜನೆಗಳೇ ಹೊರತು ಬ್ಯಾಂಕ್ ಯೋಜನೆಗಳಲ್ಲ. ಸರ್ಕಾರದ ಪ್ರತಿಯೊಂದು ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ,ಜನಪರವಾಗಿ ಅನುಷ್ಠಾನಗೊಳಿಸಲೇಬೇಕು ಎಂದು ತಾಕೀತು ಮಾಡಿದರು. ಸಾರ್ವಜನಿಕರ ಅನುಕೂಲಕ್ಕಾಗಿ ಜಾಲತಾಣಗಳಲ್ಲಿ ನಿಗಮದ ಮಾಹಿತಿಗಳು ಹಾಗೂ ಯೋಜನೆಗಳ ವಿವರಗಳನ್ನು ತ್ವರಿತವಾಗಿ ಅಪ್ ಡೇಟ್ ಮಾಡುವಂತೆ ಸೂಚಿಸಿದರು.

> ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಮಧ್ಯವರ್ತಿಗಳ ಹಾವಳಿ ಹೆಚ್ಚಿರುವ ಹಾಗೂ ಲಂಚದ ಬೇಡಿಕೆ ಇಡುತ್ತಿರುವ ಬಗ್ಗೆ ಕೇಳಿಬಂದ ದೂರುಗಳನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿಗಳು, ಆಡಳಿತದಲ್ಲಿ ಭ್ರಷ್ಟಾಚಾರವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಗುಡುಗಿದರು. -ಜಿಲ್ಲಾಧಿಕಾರಿ ಡಾ. ರವಿ

## ಪ್ರಕಾಶ್‌ರಾಜ್ ಬಂಧಿಸಿ ಎಂದು ಮಂಡ್ಯದಲ್ಲಿ ಬಿಜೆಪಿ ಕಾರ್ಯಕರ್ತರಿಂದ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಮಂಡ್ಯ

ಧಾರ್ಮಿಕ ಕ್ಷೇತ್ರ, ಧರ್ಮಸ್ಥಳದ ವಿರುದ್ಧ ಪಿತೂರಿ ನಡೆಸಿ ಕಳಂಕ ತರಲು ಹೊರಟ ಆರೋಪ ಎದುರಿಸುತ್ತಿರುವ ಬಹುಭಾಷಾ ನಟ ಪ್ರಕಾಶ್‌ರಾಜ್ ಅವರನ್ನು ಬಂಧಿಸುವಂತೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಪ್ರಕಾಶ್‌ರಾಜ್ ಮತ್ತು ಪ್ರಗತಿಪರ ಚಿಂತಕ ಪ್ರೊ.ಭಗವಾನ್ ವಿರುದ್ಧ ಘೋಷಣೆ ಕೂಗಿದರು.

ಭಕ್ತರ ಆರಾಧ್ಯ ದೈವ ಮಂಜುನಾಥಸ್ವಾಮಿ ನೆಲೆಸಿರುವ ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ಮತ್ತು ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರನ್ನು ಜೈಲಿಗೆ ಕಳುಹಿಸುವ ಹುನ್ನಾರ ನಡೆಸಿರುವ ಆರೋಪ ಹೊತ್ತ ಪ್ರಕಾಶ್ ರಾಜ್ ಮತ್ತು ಅವರ ಬೆಂಬಲಕ್ಕೆ ನಿಂತವರ ಮೇಲೆ ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.ಕೇರಳ ಮೂಲದಿಂದ ಹರಿದು ಬಂದಿರುವ 200 ಕೋಟಿ ಹಣವನ್ನು ಧರ್ಮಸ್ಥಳದ ವಿರುದ್ಧ ಸಂಚು ರೂಪಿಸುವಂತೆ ಪ್ರಕಾಶ್‌ರಾಜ್‌ಗೆ ಕೊಡಲಾಗಿದೆ. ಈ 200 ಕೋಟಿ ಷಡ್ಯಂತ್ರದ ಬಗ್ಗೆ ಮಂಡ್ಯ ಮೂಲದ ಚಿನ್ನಯ್ಯ ಬಹಿರಂಗಪಡಿಸಿದ್ದಾನೆ. ಹಿಂದೂಗಳ ಭಕ್ತಿ ಭಾವದ ಧರ್ಮಸ್ಥಳ ಕ್ಷೇತ್ರದ ಬಗ್ಗೆ ಒಂದು ಗ್ಯಾಂಗ್ ಕೆಲಸ ಮಾಡಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾ ವಕ್ತಾರ ಸಿ.ಟಿ.ಮಂಜುನಾಥ್, ಮುಖಂಡರಾದ ನಿತ್ಯಾನಂದ, ಪ್ರಸನ್ನ ಕುಮಾರ್, ಹೊಸಹಳ್ಳಿ ಶಿವು, ವಿವೇಕ್, ನಾಗಾನಾಂದ್, ಗಣೇಶ್, ಶಿವಲಿಂಗಯ್ಯ ಭಾಗವಹಿಸಿದ್ದರು.


## ಪೌರಕಾರ್ಮಿಕರಿಗೆ ಸರ್ಕಾರಿ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಿ

# ಆಯೋಗದ ವತಿಯಿಂದ ನಿರ್ದಾಕ್ಷಿಣ್ಯ ಕ್ರಮ

• ಉದಯವಾಹಿನಿ, ಚಾಮರಾಜನಗರ

-ಪೌರಕಾರ್ಮಿಕರಿಗೆ ಸರ್ಕಾರದ ಸೌಲಭ್ಯ, ಸವಲತ್ತುಗಳನ್ನು ನಿಗಧಿತ ಕಾಲಮಿತಿಯಲ್ಲಿ ಸಮರ್ಪಕವಾಗಿ ತಲುಪಿಸಲು ಮುಂದಾಗುವಂತೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯ ಸಿ. ಶಂಕರ ಅಂಕನಶೆಟ್ಟಿಪುರ ಅವರು ನಗರಸಭೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ನಗರಸಭಾ ಸಭಾಂಗಣದಲ್ಲಿ ಚಾಮರಾಜನಗರ ನಗರಸಭಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರೊಂದಿಗೆ ನಡೆದ ಸಂವಾದ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ, ಪೌರಕಾರ್ಮಿಕರ ಸಮಸ್ಯೆ, ಕುಂದುಕೊರತೆಗಳನ್ನು ಆಲಿಸಿ ಬಳಿಕ ಮಾತನಾಡಿದ ಅವರು ಸರ್ಕಾರದ ಮಾರ್ಗಸೂಚಿಗಳನ್ವಯ ಪೌರಕಾರ್ಮಿಕರಿಗೆ ಸೌಲಭ್ಯಗಳನ್ನು ತಲುಪಿಸುವಲ್ಲಿ ನಿರ್ಲಕ್ಷ್ಯವಹಿಸಿದಲ್ಲಿ ಆಯೋಗದ ವತಿಯಿಂದ ನಿರ್ದಾಕ್ಷಿಣ್ಯ ಕ್ರಮವಹಿಸಲಾಗುವುದು ಎಂದು ತಾಕೀತು ಮಾಡಿದರು.


ಉದಯವಾಹಿನಿ ಚಿತ್ರ

ಗೃಹಭಾಗ್ಯ ಯೋಜನೆಯಡಿ ಹೊಸದಾಗಿ ನೇಮಕವಾಗಿರುವ ಪೌರಕಾರ್ಮಿಕರಿಗೆ ಸೋಮವಾರಪೇಟೆ ಹಾಗೂ ರಾಮಸಮುದ್ರ ಬಡಾವಣೆಗಳಲ್ಲಿ ನಿವೇಶನಗಳನ್ನು ಹಂಚಲಾಗಿದ್ದು, ಈವರೆಗೂ ಹಕ್ಕುಪತ್ರಗಳನ್ನು ನೀಡಿರುವುದಿಲ್ಲ. ಪೌರಕಾರ್ಮಿಕರು ವಾಸಿಸುವ ಸ್ಥಳಗಳಲ್ಲಿ ರಸ್ತೆ, ಒಳಚರಂಡಿ, ಬೀದಿದೀಪ ಸೇರಿದಂತೆ ಮೂಲಸೌಲಭ್ಯಗಳಿಲ್ಲ. ಕೊಳಚೆ ಮಂಡಳಿಯಿಂದ 92 ಮನೆಗಳು ಮಂಜೂರಾಗಿದ್ದರೂ ಮನೆ ನಿರ್ಮಾಣಕ್ಕೆ ತಡೆಯೊಡ್ಡಲಾಗಿದೆ.

ಖಾಯಂ ಪೌರಕಾರ್ಮಿಕರಂತೆ ನೇರ ಪಾವತಿದಾರರಿಗೂ ವೇತನದ ಜತೆಗೆ ಸಂಕಷ್ಟ ಭತ್ಯೆಯನ್ನು ನೀಡಬೇಕು. 2-3 ತಿಂಗಳಿಗೊಮ್ಮೆ ವೇತನ ನೀಡದೆ ಪ್ರತಿತಿಂಗಳು ನೀಡಬೇಕೆಂಬ ಸಮಸ್ಯೆಗಳನ್ನು ಸಭೆಯಲ್ಲಿ ಗಮನಕ್ಕೆ ತರಲಾಯಿತು. ಸ್ವಚ್ಛತೆಗಾಗಿ ಆರೋಗ್ಯ ಸುರಕ್ಷಾ ಪರಿಕರಗಳನ್ನು ನೀಡಬೇಕು.

ಗುರುತಿನ ಚೀಟಿ ನೀಡಬೇಕು. ಪೌರಕಾರ್ಮಿಕರ ಕಲ್ಯಾಣಕ್ಕಾಗಿ ನಗರಸಭೆಯಲ್ಲಿ ಕ್ಷೇಮಾಭಿವೃದ್ಧಿ ನಿಧಿ ಮೀಸಲಿಡಬೇಕು. ವಿಶ್ರಾಂತಿಗೃಹ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು. ನಿಯಮಿತವಾಗಿ ಸಮವಸ್ತ್ರ ನೀಡುವ ವ್ಯವಸ್ಥೆಯಾಗಬೇಕು.

ಸಮಸ್ಯೆಗಳನ್ನು ಆಲಿಸಿದ ಆಯೋಗದ ಸದಸ್ಯ ಸಿ. ಶಂಕರ ಅಂಕನಶೆಟ್ಟಿಪುರ ಅವರು ಮಾತನಾಡಿ ಪ್ರತಿನಿತ್ಯ ನಗರಸ್ವಚ್ಛತೆ ಕಾಯಕ ಮಾಡುವ ಪೌರಕಾರ್ಮಿಕರ ಹಿತ ಕಾಪಾಡಲು ನಗರಸಭೆ ಬದ್ಧವಾಗಿರಬೇಕು. ಪೌರಕಾರ್ಮಿಕರ ಜೀವನ ನಿರ್ವಹಣೆಗೆ ತೊಂದರೆಯಾಗದಂತೆ ಪ್ರತಿತಿಂಗಳು 5ರೊಳಗೆ ವೇತನ ಪಾವತಿಸಬೇಕು. ಸಮವಸ್ತ್ರ, ಕೈಗ್ಲೌಸ್, ಗಮ್‌ಬೂಟ್, ಮಾಸ್ಕ್ ಸೇರಿದಂತೆ ಆರೋಗ್ಯ ಸುರಕ್ಷಾ ಪರಿಕರಗಳನ್ನು ಸಮರ್ಪಕವಾಗಿ ಒದಗಿಸಬೇಕು.

ಹೊರಗುತ್ತಿಗೆ ನೇಮಕದಲ್ಲಿನ ಮಾನದಂಡಗಳನ್ನು ಏಜೆನ್ಸಿದಾರರು ಕಡ್ಡಾಯವಾಗಿ ಪಾಲಿಸಬೇಕು. ತಪ್ಪಿದಲ್ಲಿ ಏಜೆನ್ಸಿದಾರರಿಗೆ ನೋಟಿಸ್ ಜಾರಿಗೊಳಿಸಿ ಕಪ್ಪುಪಟ್ಟಿಗೆ ಸೇರಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ನಗರಸಭೆಯಲ್ಲಿ ಕಾರ್ಯನಿರ್ವಹಿಸಿ ನಿವೃತ್ತರಾದ ಪೌರಕಾರ್ಮಿಕರನ್ನು ಸನ್ಮಾನಿಸಲಾಯಿತು. ನಗರಸಭೆ ಪೌರಾಯುಕ್ತ ಪರಶುರಾಮ ಎಂ ಛಲವಾದಿ, ಪರಿಸರ ವಿಭಾಗದ ಇಂಜಿನಿಯರ್ ರೂಪ, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮೇಘ, ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ್, ಇತರರು ಉಪಸ್ಥಿತರಿದ್ದರು.

### ಆರೋಗ್ಯ ತಪಾಸಣೆಗೆ ವ್ಯವಸ್ಥೆ ಮಾಡಿ

**ಪೌರಕಾರ್ಮಿಕರಿಗೆ ಗುಣಮಟ್ಟದ ಬೆಳಗಿನ ಉಪಹಾರ ನೀಡಬೇಕು. ಗುರುತಿನ ಚೀಟಿ ನೀಡಬೇಕು. ಇ.ಎಸ್.ಐ ಮತ್ತು ಪಿಎಫ್ ಕ್ರಮಬದ್ಧವಾಗಿ ಕಟಾವಣೆಯಾಗಬೇಕು. ಪೌರಕಾರ್ಮಿಕರ ವಿಶ್ರಾಂತಿಗೃಹ ಕಾಮಗಾರಿ ಆದಷ್ಟು ಬೇಗ ಪೂರ್ಣಗೊಳ್ಳಬೇಕು. ನಿಯಮಿತವಾಗಿ ಆರೋಗ್ಯ ತಪಾಸಣೆಗೆ ವ್ಯವಸ್ಥೆ ಮಾಡಬೇಕು.**

> ನಗರಸಭಾ ವ್ಯಾಪ್ತಿಯ ಪೌರಕಾರ್ಮಿಕರ ಕುಂದುಕೊರತೆ ಪರಿಹಾರ ಸಂಬಂಧ 15 ದಿನದೊಳಗೆ ಆಯೋಗಕ್ಕೆ ಅಧಿಕಾರಿಗಳು ವರದಿ ಸಲ್ಲಿಸಬೇಕು. ಪೌರಕಾರ್ಮಿಕರು ಯಾವುದೇ ದೂರು, ಸಮಸ್ಯೆಗಳಿದ್ದರೂ ಆಯೋಗಕ್ಕೆ ನೇರವಾಗಿ ಅಥವಾ ಲಿಖಿತವಾಗಿ ದೂರು ನೀಡಬಹುದು. ಆಯೋಗ ಇದನ್ನು ಗಂಭೀರವಾಗಿ ಪರಿಗಣಿಸಿ ಪರಿಹರಿಸಲಿದೆ ಎಂದು ತಿಳಿಸಿದರು. -ಸದಸ್ಯರಾದ ಸಿ. ಶಂಕರ ಅಂಕನಶೆಟ್ಟಿಪುರ

## ಮಿನಿ ನ್ಯೂಸ್

### ಗ್ರಾಮ ಪಂಚಾಯತಿ ನೌಕರರ ಜಿಲ್ಲಾ ಮಟ್ಟದ ಸಮಾವೇಶ




• ಉದಯವಾಹಿನಿ, ಕೋಲಾರ

ಗ್ರಾಮ ಪಂಚಾಯಿತಿ ನೌಕರರ ಬೇಡಿಕೆಗಳು ಈಡೇರಬೇಕಾದರೆ ಸಂಘಟಿತರಾಗಬೇಕು ಇಲ್ಲದೇ ಹೋದರೆ ಸರ್ಕಾರದ ಗಮನ ಸೆಳೆಯಲು ಸಾಧ್ಯವಿಲ್ಲ ಎಂದು ಗ್ರಾಮ ಪಂಚಾಯಿತಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ಜೆ.ರಾಮಕೃಷ್ಣ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ನಡೆದ ಗ್ರಾಮ ಪಂಚಾಯಿತಿ ನೌಕರರ ಜಿಲ್ಲಾ ಮಟ್ಟದ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು ಕನಿಷ್ಠ ವೇತನ ನೀಡುವ ಕುರಿತು ಸರ್ಕಾರ ಅಧಿಸೂಚನೆ ಹೊರಡಿಸಿದೆ. ಸವಲತ್ತು ನೀಡಲಾಗುವುದು ಎಂದು ಸರ್ಕಾರ ತಿಳಿಸಿದರೆ, ಮತ್ತೊಂದು ಕಡೆ ಕಾರ್ಮಿಕ ಇಲಾಖೆ ಇವುಗಳ ಕಾನೂನು ಪರಿಶೀಲನೆ ನಡೆಸಬೇಕು ಎಂದು ಸರ್ಕಾರಕ್ಕೆ ಪತ್ರ ಬರೆದಿದೆ. ನೌಕರರು ಸಂಘಟಿತ ಹೋರಾಟದ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ನೀಡಬೇಕಾಗಿದೆ ಎಂದರು. ಅಸಮರ್ಪಕ ಆರ್ಥಿಕ ನೀತಿಗಳಿಂದ ಆರ್ಥಿಕ ಅಸಮಾನತೆ ಉಂಟಾಗುತ್ತದೆ. ನೌಕರರ ವೇತನ ಹೆಚ್ಚಳವಾಗದಿರುವುದಕ್ಕೆ ಸರ್ಕಾರದ ನೀತಿ ಕಾರಣ. ನೌಕರರ ನ್ಯಾಯಬದ್ಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಹಲವು ವರ್ಷಗಳಿಂದ ಹೋರಾಟ ಮಾಡಲಾಗುತ್ತಿದೆ.

## ಬೆಸ್ಕಾಂ ಖಾಸಗೀಕರಣ ವಿರುದ್ಧ ಶ್ರೀನಿವಾಸ್ ಆಕ್ರೋಶ

• ಉದಯವಾಹಿನಿ, ಬಂಗಾರಪೇಟೆ


ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯದಲ್ಲಿ ವಿದ್ಯುತ್ ವಿತರಣಾ ಸೇವೆಯನ್ನು ಸರ್ಕಾರಿ ಸ್ವಾಮ್ಯದ ವಿದ್ಯುತ್ ವಿತರಣಾ ಕಂಪನಿಗಳು ಹಲವು ವರ್ಷಗಳಿಂದ ಯಶಸ್ವಿಯಾಗಿ ನಿರ್ವಹಿಸುತ್ತಿದ್ದು, ಸಾರ್ವಜನಿಕರು, ರೈತರು, ಕೈಗಾರಿಕೋದ್ಯಮಿಗಳು ಹಾಗೂ ವಿವಿಧ ವರ್ಗದ ಗ್ರಾಹಕರಿಗೆ ನಿರಂತರ ಮತ್ತು ಗುಣಮಟ್ಟದ ಸೇವೆಯನ್ನು ಒದಗಿಸುತ್ತಿವೆ. ಇಂತಹ ಸನ್ನಿವೇಶದಲ್ಲಿ ಟಾಟಾ ಪವರ್ ಕಂಪನಿಯು ರಾಜ್ಯದಲ್ಲಿ ವಿದ್ಯುತ್ ವಿತರಣಾ ಪರವಾನಗಿ ಪಡೆಯಲು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ (ಕೆ.ಇ.ಆರ್.ಸಿ.)ಕ್ಕೆ ಅರ್ಜಿ ಸಲ್ಲಿಸಿರುವುದು ಸಾರ್ವಜನಿಕ ವಲಯದಲ್ಲಿ ಆತಂಕಕ್ಕೆ ಕಾರಣವಾಗಿದೆ ಎಂದು ರೈತ ಮುಖಂಡ ಮರಗಲ್ ಶ್ರೀನಿವಾಸ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿದ್ಯುತ್ ವಿತರಣಾ ಕ್ಷೇತ್ರವು ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ಅತ್ಯಂತ ಮಹತ್ವದ ಸೇವೆಯಾಗಿದ್ದು, ಖಾಸಗಿ ಕಂಪನಿಗಳಿಗೆ ಈ ಕ್ಷೇತ್ರದಲ್ಲಿ ಅವಕಾಶ ನೀಡುವುದರಿಂದ ಭವಿಷ್ಯದಲ್ಲಿ ಗ್ರಾಹಕರ ಹಿತಾಸಕ್ತಿ, ರೈತರ ಸಬ್ಸಿಡಿ ಯೋಜನೆಗಳು, ನೌಕರರ ಭದ್ರತೆ ಹಾಗೂ ಸರ್ಕಾರದ ಜನಪರ ಯೋಜನೆಗಳ ಅನುಷ್ಠಾನಕ್ಕೆ ಧಕ್ಕೆಯಾಗುವ ಸಾಧ್ಯತೆ ಇದೆ. ಜೊತೆಗೆ ಸರ್ಕಾರದ ನೇರ ಮೇಲ್ವಿಚಾರಣೆ ಮತ್ತು ನಿಯಂತ್ರಣವೂ ಕಡಿಮೆಯಾಗುವ ಸಾಧ್ಯತೆ ಇದೆ. ಬೆಸ್ಕಾಂ ಖಾಸಗೀಕರಣವನ್ನು ಸರ್ಕಾರ ಕೂಡಲೇ ಕೈಬಿಡಬೇಕು. ಟಾಟಾ ಪವರ್ ಕಂಪನಿಗೆ ಮಾರಾಟ ಮಾಡಲು ತುದಿಗಾಲಲ್ಲಿ ನಿಂತಿದೆ, ರಾಜ್ಯ ಸರ್ಕಾರಕ್ಕೆ ಎಷ್ಟರ ಮಟ್ಟಿಗೆ ಬುದ್ದಿಯಿದೆ ಎಂದು ಅವರು ಕಿಡಿಕಾರಿದರು. ಆದ್ದರಿಂದ, ವಿದ್ಯುತ್ ಕಾಯ್ದೆ 2003ರ ಸೆಕ್ಷನ್ 108ರ ಅಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಇರುವ ಅಧಿಕಾರವನ್ನು ಬಳಸಿಕೊಂಡು, ಟಾಟಾ ಪವರ್ ಕಂಪನಿಯು ಸಲ್ಲಿಸಿರುವ ವಿದ್ಯುತ್ ವಿತರಣಾ ಪರವಾನಗಿ ಅರ್ಜಿಯನ್ನು ತಿರಸ್ಕರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ರಾಜ್ಯದ ವಿದ್ಯುತ್ ವಿತರಣಾ ವ್ಯವಸ್ಥೆಯು ಸಾರ್ವಜನಿಕ ವಲಯದಲ್ಲಿಯೇ ಮುಂದುವರಿದು, ಜನಸಾಮಾನ್ಯರ ಹಿತಾಸಕ್ತಿ ಕಾಪಾಡುವಂತೆ ಸರ್ಕಾರ ಸೂಕ್ತ ನಿರ್ಧಾರ ತೆಗೆದುಕೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

## ಪದಗ್ರಹಣ ಕಾರ್ಯಕ್ರಮಕ್ಕೆ ಆಗಮಿಸುವಂತೆ ನಾಗೇಂದ್ರಕುಮಾರ್ ಮನವಿ

• ಉದಯವಾಹಿನಿ,ಕೆಆರ್ ಪೇಟೆ

ಜೂನ್ 21ರ ಭಾನುವಾರ ಬೆಂಗಳೂರಿನ ಅರಮನೆ ಮೈದಾನದಲ್ಲಿ ಪ್ರದೇಶ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾದ ಬಿ.ಕೆ.ಹರಿಪ್ರಸಾದ್ ಅವರ ಪದಗ್ರಹಣ ಕಾರ್ಯಕ್ರಮ, ನಿಕಟ ಪೂರ್ವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಗೆ ಅಭಿನಂದನೆ ಹಾಗೂ ರಾಜ್ಯದ ನೂತನ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರಿಗೆ ಶುಭ ಹಾರೈಕೆಯ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು ತಾಲ್ಲೂಕಿನ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು, ಮತದಾರರು ಮತ್ತು ಮುಖಂಡರು ಸ್ವಯಂ ಪ್ರೇರಣೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷದ ಕಾರ್ಯಕ್ರಮಕ್ಕೆ ಆಗಮಿಸುವಂತೆ ತಾಲ್ಲೂಕು ಕಾಂಗ್ರೆಸ್ ಮುಖಂಡರು ಮನವಿ ಮಾಡಿದ್ದಾರೆ.


ಉದಯವಾಹಿನಿ ಚಿತ್ರ

ರಾಜ್ಯ ಕೈಮಗ್ಗ ನಿಗಮದ ಅಧ್ಯಕ್ಷ ಬಿ.ನಾಗೇಂದ್ರಕುಮಾರ್ ನೇತೃತ್ವದಲ್ಲಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿದ ಕಾಂಗ್ರೆಸ್ ಮುಖಂಡರು ಪಕ್ಷದ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಕೈಮಗ್ಗ ನಿಗಮದ ಅಧ್ಯಕ್ಷ ಬಿ.ನಾಗೇಂದ್ರಕುಮಾರ್ ಬಿ.ಕೆ.ಹರಿಪ್ರಸಾದ್ ಹೋರಾಟದ ಮೂಲಕ ಬೆಳೆದವರು.

ಶೋಷಿತರ ಧ್ವನಿಯಾಗಿರುವ ಹರಿಪ್ರಸಾದ್ ಕೆ.ಪಿ.ಸಿ.ಸಿ ಅಧ್ಯಕ್ಷರಾಗಿರುವುದು ಸಂತೋಷದ ವಿಷಯ, ಅದೇ ರೀತಿ ನಿಕಟ ಪೂರ್ವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ತಮ್ಮ ಅಧಿಕಾರದ ಅವಧಿಯಲ್ಲಿ ಅಹಿಂದ ಸಮುದಾಯಗಳ ನಾಯಕರಾಗಿ ಶೋಷಿತರ ಪರ ಕೆಲಸ ಮಾಡಿದ್ದಾರೆ. ಅಧಿಕಾರಕ್ಕೆ ಅಂಟಿಕೊಳ್ಳದೆ ಹೈಕಮಾಂಡ್ ಸೂಚಿಸಿದ ತಕ್ಷಣವೇ ತಮ್ಮ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಕೊಟ್ಟ ಮಾತಿನಂತೆ ನಡೆದುಕೊಂಡು ರಾಜಕಾರಣಿಗಳಿಗೆ ಮಾದರಿಯಾಗಿದ್ದಾರೆ. ಕೆ.ಪಿ.ಸಿ.ಸಿ ಸಾರಥಿಯಾಗಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದ ಡಿ.ಕೆ. ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿಯಾಗಿ ಈಗಾಗಲೇ ಜನ ಮೆಚ್ಚುವ ಆಡಳಿತ ಆರಂಭಿಸಿದ್ದಾರೆ. ಇವರೆಲ್ಲರ ಅಭಿನಂದನಾ ಕಾರ್ಯಕ್ರಮಕ್ಕೆ ತಾಲ್ಲೂಕಿನ ಕಾಂಗ್ರೆಸ್ಸಿಗರು ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿ ಪಕ್ಷದ ಬಲವನ್ನು ಹೆಚ್ಚಿಸುವಂತೆ ಮನವಿ ಮಾಡಿದರು

## ಸಾಸಲು ಕ್ಷೇತ್ರದಲ್ಲಿ ಬನಶಂಕರಿ ದೇವಿ ಹಾಗೂ ಮರುಳಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ

• ಉದಯವಾಹಿನಿ ,ಹುಳಿಯಾರು

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಶೆಟ್ಟಿಕೆರೆ ಹೋಬಳಿಯ ಪ್ರಸಿದ್ಧ ಪುಣ್ಯಕ್ಷೇತ್ರವಾದ ಸಾಸಲು ಗ್ರಾಮದಲ್ಲಿ ಜಗನ್ಮಾತೆ ಶ್ರೀ ಬನಶಂಕರಿ ದೇವಿ ಮತ್ತು ಜಗದ್ಗುರು ಶ್ರೀ ಮರುಳಸಿದ್ದೇಶ್ವರ ಸ್ವಾಮಿಯವರ ಭವ್ಯ ಜಾತ್ರಾ ಮಹೋತ್ಸವವು ಜೂನ್ 30 ರಿಂದ ಜುಲೈ 2ರವರೆಗೆ ಅತ್ಯಂತ ವೈಭವದಿಂದ ಜರುಗಲಿದೆ. ಜೂನ್ 30 ರ ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಭಕ್ತರ ಪ್ರಮುಖ ಆಕರ್ಷಣೆಯಾದ ಅಗ್ನಿ ಕುಂಡೋತ್ಸವ ನೆರವೇರಲಿದೆ. ಜುಲೈ 1 ರ ಬುಧವಾರ ಸಾಂಪ್ರದಾಯಿಕ ಕಲೆಯಾದ ವೀರಗಾರಿಕೆ ಹಾಗೂ ದೇವರಿಗೆ ಉಯ್ಯಾಲೋತ್ಸವ ಸೇವೆಗಳು ಜರುಗಲಿವೆ. ಜುಲೈ 2 ರ ಗುರುವಾರ ಮಧ್ಯಾಹ್ನ 12 ಗಂಟೆಗೆ ಜಾತ್ರಾ ಮಹೋತ್ಸವದ ಪ್ರಮುಖ ಘಟ್ಟವಾದ ಭವ್ಯ ಮಹಾ ರಥೋತ್ಸವ ಸಕಲ ಮಂಗಳ ವಾದ್ಯಗಳೊಂದಿಗೆ ಅತ್ಯಂತ ವಿಜೃಂಭಣೆಯಿಂದ ಜರುಗಲಿದೆ.

## ಮೈಸೂರು ಜಿಲ್ಲೆಯಲ್ಲಿ 13,677 ಗೃಹಲಕ್ಷ್ಮಿ ಫಲಾನುಭವಿಗಳ ಸಾವು: ಸಭೆಯಲ್ಲಿ ಅಧಿಕಾರಿ ಮಾಹಿತಿ

• ಉದಯವಾಹಿನಿ, ಮೈಸೂರು

ಮೈಸೂರು ಜಿಲ್ಲೆಯಲ್ಲಿ 13,677 ಗೃಹಲಕ್ಷ್ಮಿ ಫಲಾನುಭವಿಗಳು ಮೃತಪಟ್ಟಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ನಾಗರಾಜು ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ್ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾಹಿತಿ ನೀಡಿದ ಅವರು, ಜಿಲ್ಲೆಯಲ್ಲಿ ಒಟ್ಟು 13,677 ಗೃಹಲಕ್ಷ್ಮಿ ಫಲಾನುಭವಿಗಳು ಮರಣ ಹೊಂದಿದ್ದಾರೆ. ಮನೆ-ಮನೆಗೆ ಭೇಟಿ ನೀಡಿ ಅಂಗನವಾಡಿ ಕಾರ್ಯಕರ್ತೆಯರು ಪರಿಶೀಲಿಸಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ವರದಿ ನೀಡುತ್ತಿದ್ದಾರೆ. ಪರಿಶೀಲನೆ ಕೆಲಸವನ್ನು ಬೇಗನೆ ಪೂರ್ಣಗೊಳಿಸಲಾಗುವುದು. ಬಯೋಮೆಟ್ರಿಕ್ ಹಾಗೂ ಹೊಸ ಅರ್ಜಿ ಸಲ್ಲಿಕೆ ಕುರಿತಂತೆ ಸರಕಾರದಿಂದ ಮಾರ್ಗಸೂಚಿ ಬಂದಿರುವುದಿಲ್ಲ. ಬಂದ ಕೂಡಲೇ ಅನುಷ್ಠಾನಗೊಳಿಸಲಾಗುವುದು ಎಂದು ವಿವರಣೆ ನೀಡಿದರು.


ಉದಯವಾಹಿನಿ ಚಿತ್ರ

ಗೃಹಲಕ್ಷ್ಮಿ ಯೋಜನೆಯಡಿ 2026-27ನೇ ಸಾಲಿನಲ್ಲಿ ಬಿಡುಗಡೆಯಾದ ಮೊದಲನೇ ಕಂತಿನಲ್ಲಿ 6,71,674 ಲಾನುಭವಿಗಳಿಗೆ ರೂ. 134,33,48,000 ಅನುದಾನ ಬಿಡುಗಡೆಯಾಗಿದ್ದು, ಫಲಾನುಭವಿಗಳಿಗೆ ಪಾವತಿಯಾಗಿರುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಸ್. ಅರುಣ್ ಕುಮಾರ್ ಮಾತನಾಡಿ, ಸರ್ಕಾರ ಬಡವರು, ಹಿಂದುಳಿದ ವರ್ಗದವರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ.

ಪಂಚ ಗ್ಯಾರಂಟಿ ಯೋಜನೆಗಳು ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ. ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಮಾತ್ರ ತಲುಪಬೇಕು ಎಂಬುದು ಸಮಿತಿಯ ಉದ್ದೇಶ ಎಂದರು.

ತಾಲ್ಲೂಕು ಮಟ್ಟದಲ್ಲಿ ನಡೆಯುವ ಸಮಿತಿ ಸಭೆಯಲ್ಲಿ ಅಧಿಕಾರಿಗಳು ಹಾಜರಾಗಬೇಕು. ಹಾಜರಾಗದಿದ್ದಲ್ಲಿ ಜಿಲ್ಲಾ ಮಟ್ಟದ ಸಮಿತಿಗೆ ವರದಿ ನೀಡಬೇಕು ಎಂದು ಹೇಳಿದರು. ಜಿಲ್ಲಾ ಗ್ಯಾರಂಟಿ ಯೋಜನೆಯ ಉಪಾಧ್ಯಕ್ಷ ಪ್ರೊ. ಶಿವಕುಮಾರ್ ಮಾತನಾಡಿ, ಗೃಹಲಕ್ಷ್ಮಿ ಯೋಜನೆಯಲ್ಲಿ ಮೃತ ಫಲಾನುಭವಿ, ಐಟಿ, ಜಿಎಸ್ಟಿ ಪಾವತಿ ಮಾಡುತ್ತಿರುವ ಲಾನುಭವಿಗಳು ಅನರ್ಹರಾಗಿದ್ದು, ಅವರಿಗೆ ಪಾವತಿಸಲಾಗುತ್ತಿರುವ ಗೃಹಲಕ್ಷ್ಮಿ ಹಣ ನಿಲುಗಡೆಯಾಗಬೇಕು. ಅನರ್ಹರಾಗಿ ಹಣ ಪಡೆದಿದ್ದಲ್ಲಿ ಅವರಿಂದ ವಸೂಲಿ ಮಾಡಬೇಕು. ಗೃಹಲಕ್ಷ್ಮಿ ಯೋಜನೆಯ ಅನರ್ಹ ಫಲಾನುಭವಿಗಳ ನಿಖರ ಮಾಹಿತಿಯನ್ನು ಸಭೆಗೆ ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಯ ಉಪಾಧ್ಯಕ್ಷ ಹುಣಸೂರು ಬಸವಣ್ಣ ಮಾತನಾಡಿ, ಅರ್ಹ ಫಲಾನುಭವಿಗಳಿಗೆ ಪಂಚ ಗ್ಯಾರಂಟಿ ಯೋಜನೆ ತಲುಪಿಸಲು ತೊಂದರೆಯಿದ್ದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ತಕ್ಷಣ ಪರಿಹಾರಕ್ಕೆ ಕ್ರಮ ವಹಿಸಬೇಕು

## ಜೂ 22 ಇಷ್ಟಲಿಂಗ ಪೂಜೆ ಯಶಸ್ವಿಗೆ ಕರೆ

• ಉದಯವಾಹಿನಿ, ಮಾಲೂರು


ಉದಯವಾಹಿನಿ ಚಿತ್ರ

ತಾಲ್ಲೂಕಿನ ತೊರ್ನಹಳ್ಳಿ ಗ್ರಾ.ಪಂ.ನ ಬೆಳ್ಳಾವಿ ಗ್ರಾಮದ ವೀರ ಸಂಸ್ಥಾನ ಮಠ ಬೆಳ್ಳಾವಿಯಲ್ಲಿ ಶ್ರೀ ಪಟ್ಟದ ಮಹಾಂತ ಶಿವಾಚಾರ್ಯ 40ನೇ ವರ್ಷದ ಪಟ್ಟಾಭಿಷೇಕ ಮಹೋತ್ಸವ ಅಂಗವಾಗಿ ಮೈಸೂರು ಸಂಸ್ಥಾನ ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳ ಇಷ್ಟ ಲಿಂಗ ಮಹಾ ಪೂಜೆಯನ್ನು ಜೂ 22 ರಂದು ಬೆಳಗ್ಗೆ 9ಕ್ಕೆ ಮಠದಲ್ಲಿ ಹಮ್ಮಿಕೊಳ್ಳಲಾಗಿದೆ ಮಠದ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಲು ಮನವಿ ಮಾಡಿದ್ದಾರೆ. ತಾಲ್ಲೂಕಿನ ಬೆಳ್ಳಾವಿ ಗ್ರಾಮದಲ್ಲಿರುವ ಬೆಳ್ಳಾವಿ ಸಂಸ್ಥಾನ ಮಠಕ್ಕೆ ನೂರಾರು ವರ್ಷಗಳ ಇತಿಹಾಸವಿದ್ದು ಭಕ್ತಾಧಿಗಳ ಸಹಕಾರದಲ್ಲಿ ಮಠದ ಆವರಣದಲ್ಲಿ ಹಲವಾರು ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡಿಕೊಂಡು ಬರಲಾಗುತ್ತಿದೆ. ಪಂಚ ಪೀಠಗಳ ಮಠಾಧೀಶರುಗಳು ಮಠದಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶುಭ ಹಾರೈಸಿದ್ದಾರೆ. ಮಠದ ಆವರಣದಲ್ಲಿ ಜೂ 22ರಂದು ಇಷ್ಟಲಿಂಗ ಪೂಜೆ, ಬಸವ ಜಯಂತಿ, ರೇಣುಕಾಚಾರ್ಯ ಜಯಂತಿ, 54ನೇ ಹುಟ್ಟು ಹಬ್ಬವನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕೆ.ಎಸ್.ಮಂಜುನಾಥಗೌಡ, ಜಂಗಮ ಮಠದ ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ರಾಜಾಪುರ ಮಠದ ರಾಜೇಶ್ವರ ಶಿವಾಚಾರಸ್ವಾಮಿ, ಬಳ್ಳನಪುರಿ ಪಂಚಾಕ್ಷರಿ ಶಿವಾಚಾರ್ಯ ಸ್ವಾಮಿಗಳು, ಗುಮ್ಮಲಾಪುರ ಮಠದ ಶಿವಾನಂದ ಶಿವಾಚಾರ್ಯ ಸ್ವಾಮಿಗಳು, ಚನ್ನಪಟ್ಟಣದ ವಿರಕ್ತಮಠದ ಶಿವರುದ್ರಸ್ವಾಮಿ, ನಾಗಲಾಪುರ ಸಂಸ್ಥಾನ ಮಠದ ತೇಜೇಶ ಲಿಂಗಾ ಶಿವಾಚಾರ್ಯಸ್ವಾಮಿ, ಹುಣಸಮಾರನಹಳ್ಳಿ ಮಠದ ಗುರುನಂಜೇಶ್ವರ ಶಿವಾಚಾರ ಸ್ವಾಮಿ, ಗುರುವಣ್ಣ ದೇವರ ಮಠ ನಂಜುಂಡಸ್ವಾಮಿ, ಬೇವೂರು ಮಠ ಮೃತ್ಯುಂಜಯ ಶಿವಾಚಾರಸ್ವಾಮಿ, ನಿಜಗುಣಿ ಕ್ಷೇತ್ರ ಇಮ್ಮಡಿ ನಿಜಗುಣಸ್ವಾಮಿ, ನಿವೃತ್ತ ಐಎಎಸ್ ಅಧಿಕಾರಿ ಸಿ.ಸೋಮಶೇಖರ್, ಇನ್ನಿತರರು ಭಾಗವಹಿಸಲಿದ್ದಾರೆ.

# ಹುಳಿಯಾರು ಟಿ.ಎಸ್.ಹಳ್ಳಿಯಲ್ಲಿ ನಾಯಿಗಳ ರೌದ್ರಾವತಾರ

• ಉದಯವಾಹಿನಿ, ಹುಳಿಯಾರು

ಕಳೆದ ಇಪ್ಪತ್ತು ದಿನಗಳಿಂದ ಹುಳಿಯಾರು ಸಮೀಪದ ತೊರೆಸೂರಗೊಂಡನಹಳ್ಳಿಯಲ್ಲಿ ಬೀಡಾಡಿ ನಾಯಿಗಳು ನಡೆಸುತ್ತಿರುವ ಕುರಿ-ಮೇಕೆಗಳ ಸರಣಿ ಬೇಟೆಗೆ ರೈತರು ಜರ್ಜರಿತರಾಗಿದ್ದಾರೆ. ತಮ್ಮ ಕಣ್ಣೆದುರೇ ಲಕ್ಷಾಂತರ ರೂಪಾಯಿ ಮೌಲ್ಯದ ಜಾನುವಾರುಗಳು ರಕ್ತದ ಮಡುವಿನಲ್ಲಿ ಸಾಯುತ್ತಿರುವುದನ್ನು ಕಂಡು ಬೇಸತ್ತಿರುವ ಈ ಭಾಗದ ರೈತರು, ಜೀವನಾಧಾರವಾಗಿದ್ದ ಕುರಿ ಸಾಕಾಣಿಕೆಯನ್ನೇ ಸಂಪೂರ್ಣವಾಗಿ ಕೈಬಿಡುತ್ತಿದ್ದಾರೆ.

ಗ್ರಾಮದ ನಂದಿಹಳ್ಳಿ ರಸ್ತೆಯ ಚಾನೆಲ್ ಬಳಿ ಕೆಲಸ ಮಾಡುವ ಕಾರ್ಮಿಕರು ತಿಂದ ಬಳಿಕ ಉಳಿದ ಮಾಂಸಾಹಾರ, ಹಾಗೂ ಕೋಳಿ ಅಂಗಡಿಯವರು ಮೂಳೆ ಹಾಗೂ ಕೋಳಿ ತ್ಯಾಜ್ಯಗಳನ್ನು ಚೀಲಗಳಲ್ಲಿ ತುಂಬಿ ತಂದು ಹಳ್ಳ ಹಾಗೂ ರಸ್ತೆ ಬದಿಗಳಲ್ಲಿ ಎಸೆಯುತ್ತಿದ್ದಾರೆ. ಹೀಗೆ ಎಸೆದ ಮಾಂಸವನ್ನು ತಿಂದು ಕೊಬ್ಬಿರುವ ಹಾಗೂ ಅದರ ರುಚಿಗೆ ಬಿದ್ದಿರುವ ಐದಾರು ಸಾಕು ಮತ್ತು ಬೀಡಾಡಿ ನಾಯಿಗಳು ಈಗ ನೇರವಾಗಿ ರೈತರ ಕುರಿ-ಮೇಕೆಗಳನ್ನೇ ಬೇಟೆಯಾಡಲು ಶುರುಮಾಡಿವೆ. ಮೇಯಲು ಹೋಗುವ ಕುರಿಗಳ ಹಿಂಡಿಗೆ ನಾಯಿಗಳು ಒಮ್ಮೆಲೇ ಮುತ್ತಿಗೆ ಹಾಕಿ, ಅವುಗಳ ಕುತ್ತಿಗೆಗೆ (ಗೌಳಿಗೆ) ಬಾಯಿಹಾಕಿ ರಕ್ತ ಹೀರಿ ಕೊಲ್ಲುತ್ತಿರುವುದು ಕುರಿಗಾರರನ್ನು ಕಂಗಾಲು ಮಾಡಿದೆ.



ಕಳೆದ 20 ದಿನಗಳಿಂದ ಈ ನಾಯಿಗಳು ಸರಿಸುಮಾರು ಏಳೆಂಟು ಕುರಿಗಾರರ ಕುರಿಮೇಕೆಗಳನ್ನು ಬಲಿ ಪಡೆದಿವೆ. ಈ ಮಧ್ಯೆ ರೈತ ಮೈಲಾರಣ್ಣ ಅವರ ಕುರಿಗಳನ್ನು ತಿನ್ನಲು ನಾಯಿಗಳು ದಾಳಿ ಮಾಡಿದಾಗ, ಗಂಡ-ಹೆಂಡತಿ ಇಬ್ಬರೂ ಜೀವದ ಹಂಗು ತೊರೆದು ಹೋರಾಡಿ ನಾಯಿಗಳಿಂದ ಕುರಿಗಳನ್ನು ಬಿಡಿಸಿಕೊಂಡು ಬಂದಿದ್ದಾರೆ. ಹೀಗೆ ನಿತ್ಯವೂ ನಾಯಿಗಳ ಉಪಟಳ ಹೆಚ್ಚಾಗಿದ್ದು ಬುಧವಾರ ಶಂಕರಯ್ಯ ಅವರ ಪತ್ನಿ 25 ಕುರಿಗಳನ್ನು ಮೇಯಿಸಲು ಚಾನಲ್ ಬಳಿಯ ಗದ್ದೆಗೆ ಹೋಗಿದ್ದರು. ಈ ಸಂದರ್ಭದಲ್ಲಿ ಏಕಾಏಕಿ ಐದಾರು ನಾಯಿಗಳು ಕುರಿಗಳ ಮೇಲೆರಗಿ 4 ಕುರಿಗಳನ್ನು ಕಚ್ಚಿ ಕೊಂದಿದ್ದು, ದಾಳಿಯ ಭಯಕ್ಕೆ ಬೆದರಿದ ಮತ್ತೂ ಏಂಟತ್ತು ಕುರಿಗಳು ಓಡಿ ಹೋಗಿದ್ದು, ಇನ್ನು ಪತ್ತೆಯಾಗಿಲ್ಲ.

ರೈತರು ಒಂದಲ್ಲ ಒಂದು ರೀತಿಯ ಸಂಕಷ್ಟಗಳನ್ನು ಎದುರಿಸುತ್ತಲೇ ಇದ್ದಾರೆ. ಪ್ರಕೃತಿ ವಿಕೋಪ, ಬೆಲೆ ಕುಸಿತ ಹೀಗೆ ಅನೇಕ ಕೃಷಿ ಸಮಸ್ಯೆಗಳಿಂದ ಆರ್ಥಿಕ ಚೈತನ್ಯ ಪಡೆಯಲು ಕುರಿಸಾಕಾಣಿಕೆಯ ಮೊರೆ ಹೋಗಿದ್ದಾರೆ.

ಇಂತಹ ರೈತರ ಜೀವನಾಧಾರವಾಗಿರುವ ಕುರಿ-ಮೇಕೆಗಳ ಮೇಲೆ ಬೀಡಾಡಿ ನಾಯಿಗಳು ಹಿಂಡು ಹಿಂಡಾಗಿ ಮುಗಿಬೀಳುತ್ತಿದ್ದು, ಕುರಿಗಾರರು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ. ಗ್ರಾಮದ ಸುತ್ತಮುತ್ತ ಮಾಂಸದ ತ್ಯಾಜ್ಯವನ್ನು ಬೇಕಾಬಿಟ್ಟಿ ಎಸೆಯುತ್ತಿರುವುದೇ ಈ ಮಾರಣಹೋಮಕ್ಕೆ ಮುಖ್ಯ ಕಾರಣವಾಗಿದ್ದು, ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

> ನಮ್ಮ ಹಳ್ಳಿಯಲ್ಲಿ ದಿನಕ್ಕೊಂದು ಕುರಿ ಸಾಯುತ್ತಿದೆ. ರೈತರು ಲಕ್ಷಾಂತರ ರೂಪಾಯಿ ಸಾಲ ಮಾಡಿ ಕುರಿ ಸಾಕಿರುತ್ತಾರೆ, ಆದರೆ ನಾಯಿಗಳು ಹೀಗೆ ಕಚ್ಚಿ ಕೊಂದರೆ ಅವರು ಬದುಕುವುದಾದರೂ ಹೇಗೆ? ದಿನ ಬೆಳಗಾದರೆ ಸಾಕು ಯಾವ ಕುರಿ ಸಾಯುತ್ತದೋ ಎಂಬ ಆತಂಕ ಶುರುವಾಗಿದೆ.
> ಈಗಾಗಲೇ ರಾಮಚಂದ್ರ ಅವರಂತಹ ದೊಡ್ಡ ಕುರಿಗಾರರೇ ಹೆದರಿ ಕುರಿ ಸಾಕುವುದನ್ನು ನಿಲ್ಲಿಸಿಬಿಟ್ಟಿದ್ದಾರೆ. ಇನ್ನು ಕೆಲವರ ಕುರಿಗಳು ನಾಯಿಗಳಿಗೆ ಹೆದರಿ ಓಡಿಹೋಗಿ ನಾಪತ್ತೆಯಾಗಿವೆ.

# ಗುಂಡ್ಲುಪೇಟೆಯಲ್ಲಿ ಮಾರ್ದನಿಸಿದ ಬಸವತತ್ವ: ಸಾಂಸ್ಕೃತಿಕ ವೈಭವಕ್ಕೆ ಸಾಕ್ಷಿಯಾದ ಜನಸ್ತೋಮ

• ಉದಯವಾಹಿನಿ,ಗುಂಡ್ಲುಪೇಟೆ

ಅಖಿಲ ಭಾರತ ವೀರಶೈವ ಮಹಾಸಭಾ ಹಾಗೂ ವೀರಶೈವ ಸಂಘ ಸಂಸ್ಥೆಗಳ ಒಕ್ಕೂಟದ ವತಿಯಿಂದ ಪಟ್ಟಣದಲ್ಲಿ ಬುಧವಾರ ಆಯೋಜಿಸಿದ್ದ ವಿಶ್ವಗುರು ಬಸವೇಶ್ವರರ ಜಯಂತಿಯು ವಿಜೃಂಭಣೆಯಿಂದ ಜರುಗಿತು.

ಪಟ್ಟಣದ ಜೆಎಸ್‌ಎಸ್ ಕಾಲೇಜು ಮುಂಭಾಗ ಅಲಂಕೃತಗೊಳಿಸಿದ್ದ ಬೆಳ್ಳಿ ರಥದಲ್ಲಿನ ಬಸವೇಶ್ವರರ ಭಾವಚಿತ್ರಕ್ಕೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಮಾಜಿ ಶಾಸಕ ನಿರಂಜನ್ ಕುಮಾರ್ ಹಾಗೂ ಮಠಾದೀಶರು ಪುಷ್ಪಾರ್ಚನೆ ಸಲ್ಲಿಸಿ ಬಳಿಕ ಚಾಲನೆ ನೀಡಲಾಯಿತು.

ಜೆ ಎಸ್ ಎಸ್ ಕಾಲೇಜಿನಿಂದ ಆರಂಭವಾದ ಮೆರವಣಿಗೆಯಲ್ಲಿ ಭಾಗಿಯಾಗಿದ್ದ ಸಾವಿರಾರು ಮಂದಿ ಬಸವಾಧಿ ಶರಣರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಾಗಿ ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ನಂದಿಧ್ವಜ, ಬಸವೇಶ್ವರ ಭಾವಚಿತ್ರವಿರುವ ಧ್ವಜಗಳನ್ನ ಹಿಡಿದ ಶರಣರ ಕೂಟ ಆಕರ್ಷಣೀಯವಾಗಿತ್ತು.


ಉದಯವಾಹಿನಿ ಚಿತ್ರ


ಗಮನ ಸೆಳೆದ ಬಸವೇಶ್ವರರ ಕಂಚಿನ ಮೂರ್ತಿ

### ಕಲಾತಂಡಗಳ ಸಮಾಗಮ

ಅದ್ದೂರಿ ಮೆರವಣಿಗೆಯಲ್ಲಿ ನಾಡಿನ ಕಲೆ ಮತ್ತು ಸಂಸ್ಕೃತಿಯನ್ನ ಜೀವಂತವಾಗಿರಿಸಿರುವ ವಿವಿಧ ಜಾನಪದ ಕಲಾತಂಡಗಳು ಕಣ್ಮನ ಸೆಳೆದವು. ಕಂಸಾಳೆ, ಡೊಳ್ಳು ಕುಣಿತ, ಮಂಗಳವಾದ್ಯ, ವೀರಗಾಸೆ, ಭಜನಾ ತಂಡಗಳ ಕಲಾಪ್ರದರ್ಶನಕ್ಕೆ ಜನರು ಮೆಚ್ಚುಗೆ ವ್ಯಕ್ತಪಡಿಸಿದರು, ವೀರಗಾಸೆ, ನಂದಿಧ್ವಜ ಕುಣಿತದ ಮೂಲಕ ಮೆರವಣಿಗೆಯ ಕಳೆ ಹೆಚ್ಚಿಸಿದರು. ಸತ್ತಿಗೆ ಸೂರಪಾನಿ ಸೇರಿದಂತೆ ಇನ್ನಿತರ ಸಂಸ್ಕುತಿಯನ್ನ ಪ್ರತಿಬಿಂಬಿಸುವ ಸೊಬಗು ಆಕರ್ಷಣೀಯವಾಗಿತ್ತು.

ಮೆರವಣಿಗೆಯಲ್ಲಿ ಸಾಗಿದ ಆಳೆತ್ತರದ ಬಸವೇಶ್ವರರ ಕಂಚಿನ ಮೂರ್ತಿಯು ನೋಡುಗರ ಪ್ರಮುಖ ಕೇಂದ್ರಬಿಂದುವಾಗಿತ್ತು, ರಸ್ತೆಯ ಎರಡೂ ಬದಿಯಲ್ಲಿ ಸೇರಿದ್ದ ಭಕ್ತ ಸಮೂಹ ಭಕ್ತಿಭಾವ ಸಮರ್ಪಿಸಿದ್ದು ವಿಶೇಷವಾಗಿತ್ತು. ಇದರ ನಡುವೆಯೇ ನಂದಿ ಧ್ವಜ ಹೊತ್ತು ಕುಣಿದು ಕುಪ್ಪಳಿಸಿದ ಯುವಕರು ಕಲಾವಿದರು ಜನರನ್ನ ರಂಜಿಸಿದರು.

### ಹಳ್ಳಿಕಾರ್ ಓರಿ - ಗೂಳಿ ಪ್ರದರ್ಶನ

ಮೆರವಣಿಗೆ ಮಾರ್ಗದುದ್ದಕ್ಕೂ ಬಸವಧ್ವಜಗಳ ನಡುವೆ ಹಳ್ಳಿಕಾರ್ ಓರಿ ಹಾಗೂ ಗೂಳಿ ಪ್ರದರ್ಶನ ನೆರೆದಿದ್ದ ಭಕ್ತರ ಗಮನ ಸೆಳೆಯಿತು, ತಾಲ್ಲೂಕಿನ ವಿವಿಧ ಭಾಗಗಳಿಂದ ಕರೆತಂದಿದ್ದ ಹಳ್ಳಿಕಾರ್ ಓರಿಗಳ ಜೊತೆಗೆ ಯುವಕರು ಫೋಟೋ ಕ್ಲಿಕ್ಕಿಸಿಕೊಳ್ಳುತ್ತಿದ್ದ ದೃಶ್ಯಗಳು ಸೆರೆಯಾದವು.

### ಹಾಲಿ ಮಾಜಿ ಶಾಸಕರಿಗೆ ಸನ್ಮಾನದ ಅಭಿನಂದನೆ

ಬಸವ ಜಯಂತಿ ಕಾರ್ಯಕ್ರಮದ ಒಂದೇ ವೇದಿಕೆಯಲ್ಲಿ ಪಕ್ಷಭೇದವಿಲ್ಲದೆ ಬೆರೆತ ಹಾಲಿ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಹಾಗೂ ಮಾಜಿ ಶಾಸಕ ಸಿ.ಎಸ್.ನಿರಂಜನ್ ಕುಮಾರ್ ಅವರನ್ನ ಒಂದೇ ಪುಷ್ಪದಾರದಡಿ ಸನ್ಮಾನಿಸಿ ಗೌರವಿಸಿದರು.

### ಡಿಜೆ ಸದ್ದಿಗೆ ಹೆಜ್ಜೆ ಹಾಕಿದ ಯುವಕರು

ಪಟ್ಟಣದಲ್ಲಿ ಹಬ್ಬದ ವಾತಾವರಣವೇ ಮನೆ ಮಾಡಿತ್ತು ಕಳೆದ ಹದಿನೈದು ದಿನಗಳಿಂದ ಪಟ್ಟಣದ ಊಟಿ ರಸ್ತೆಯ ಅಂಬೇಡ್ಕರ್ ವೃತ್ತದಿಂದ ಹಳೆ ಬಸ್ ನಿಲ್ದಾಣ ,ಸುರಭಿ ವೃತ್ತದನಕ ದೀಪಾಲಂಕಾರ ತ್ರಿವಿಧ ದಾಸೋಹಿ ಶಿವಕುಮಾರ ಶ್ರೀಗಳು ಬಸವಣ್ಣನವರ ಭಾವಚಿತ್ರದ ದೊಡ್ಡ ಫಲಕಗಳನ್ನ ಅಳವಡಿಸಿ ಮೆರುಗು ಹೆಚ್ಚಿಸಲಾಗಿತ್ತು.

## ಬಾಳೆ ತೋಟದಲ್ಲಿ ಹುಲಿ ಪ್ರತ್ಯಕ್ಷ

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ತಾಲ್ಲೂಕಿನ ವಡೆಯನಪುರ ಗ್ರಾಮದ ರೈತರ ಜಮೀನಿನ ಬಾಳೆ ತೋಟದಲ್ಲಿ ಹುಲಿ ಪ್ರತ್ಯಕ್ಷವಾದ ಹಿನ್ನಲೆ ಸ್ಥಳೀಯರು ಆತಂಕಕ್ಕೆ ಒಳಗಾಗಿದ್ದಾರೆ.

ಗ್ರಾಮದ ವಿಶ್ವಾಸ್ ಎಂಬವರ ಜಮೀನಿನಲ್ಲಿ ಕೂಲಿ ಕಾರ್ಮಿಕರಿಗೆ ಕಾಣಿಸಿಕೊಂಡಿರುವ ವ್ಯಾಘ್ರ ಭಯಭೀತಿಗೊಳಿಸಿದೆ.

**ಸಿಬ್ಬಂದಿ ಎದುರೇ ರಸ್ತೆ ದಾಟಿದ ವ್ಯಾಘ್ರ :** ಹಾಡಹಗಲೇ ಹುಲಿ ಕಾಣಿಸಿಕೊಂಡ ಹಿನ್ನಲೆ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ ಬೆನ್ನಲ್ಲೇ ಸ್ಥಳಕ್ಕಾಗಮಿಸಿದ ಸಿಬ್ಬಂದಿ ಕಣ್ಣೆದುರಲ್ಲೇ ರಸ್ತೆ ದಾಟಿ ಮುಂದೆ ಸಾಗಿರುವುದು ಮತ್ತಷ್ಟು ಆತಂಕಕ್ಕೆ ಎಡೆಮಾಡಿಕೊಟ್ಟಿದೆ. ಹುಲಿಯ ಚಲನವಲನದ ಮೇಲೆ ನಿಗಾವಹಿಸಲು ಮುಂದಾಗಿರುವ ಬಫರ್ ವಲಯದ ಅಧಿಕಾರಿಗಳು ಕ್ಯಾಮೆರಾ ಅಳವಡಿಸಿದ್ದು ತುಮಕೂರು ಮಾದರಿಯ ಪಂಜರವನ್ನಿರಿಸಿರುವ ಸಿಬ್ಬಂದಿ ಬೋನಿನೊಳಗೆ ಯಾವುದೇ ಪ್ರಾಣಿಯನ್ನ ಇರಿಸದಿರವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ. ಇಂತಹ ಘಟನೆಗಳಿಂದ ಬೇಸತ್ತ ಗ್ರಾಮಸ್ಥರು ಕಳೆದ ಕೆಲ ದಿನಗಳ ಹಿಂದೆ ಸಿಬ್ಬಂದಿಗಳನ್ನೇ ಬೋನಿನಲ್ಲಿ ಕೂಡಿಟ್ಟು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು, ಯಾವುದೇ ಗೊಂದಲಗಳಿಗೆ ಎಡೆ ಮಾಡಿಕೊಡದೆ ಹುಲಿ ಸೆರೆಗೆ ಮುಂದಾಗಬೇಕು ಎಂದು ಮುಖಂಡರು ಆಗ್ರಹಿಸಿದ್ದಾರೆ.

